ಸಂಪುಟ : 9 ಸಂಚಿಕೆ 60 ಪುಟ : 4 ಬೆಲೆ: 3.00 ಶುಕ್ರವಾರ ಏಪ್ರಿಲ್ 5 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 60 Pages : 4 Price : 3.00 Friday April 5 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನರೇಗಾ ಸಮುದಾಯ ಕಾಮಗಾರಿ ಸ್ಥಳದಲ್ಲಿ ಚುನಾವಣಾ ಜಾಗೃತಿ ಅಭಿಯಾನ

# ಚುನಾವಣಾ ಹಬ್ಬದಲ್ಲಿ ತಪ್ಪದೇ ಮತ ಚಲಾಯಿಸಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಈಗ ಹಬ್ಬದ ಸಮಯ ಶುರುವಾಗಿದೆ. ಅದರಲ್ಲಿ ಚುನಾವಣೆಯೂ ಒಂದು ಹಬ್ಬ. ಈ ಹಬ್ಬದಲ್ಲಿ ಎಲ್ಲರೂ ತಪ್ಪದೇ ಮತ ಚಲಾವಣೆ ಮಾಡಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ ಗದಗ, ತಾಲೂಕಾ ಸ್ವೀಪ್ ಸಮಿತಿ ಮುಂಡರಗಿ ಹಾಗೂ ಗ್ರಾಮ ಪಂಚಾಯಿತಿ ಬಿದರಹಳ್ಳಿ ಸಹಯೋಗದಲ್ಲಿ ಗುರುವಾರ ಮುಂಡವಾಡ ಗ್ರಾಮದ ಕೆರೆ ಹೂಳೆತ್ತುವ ನರೇಗಾ ಸಮುದಾಯ ಕಾಮಗಾರಿ ಸ್ಥಳದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಾಗೂ 'ವಲಸೆ ಯಾಕ್ರಿ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ' ಜಾಗೃತಿ ಅಭಿಯಾನದಲ್ಲಿ ಅವರು ಮಾತನಾಡಿದರು.

ಗುಳೇ ತಪ್ಪಿಸಲು ಈಗಾಗಲೇ ನರೇಗಾ ಸಮುದಾಯ ಕಾಮಗಾರಿಗಳು ತಾಲೂಕಿನಾದ್ಯಂತ ಆರಂಭವಾಗಿವೆ. ಮೇ ತಿಂಗಳ 7ನೇ ತಾರೀಕಿಗೆ ನಿಗದಿಯಾಗಿರುವ ಲೋಕಸಭಾ ಚುನಾವಣೆಯಲ್ಲಿ ನರೇಗಾ ಕೂಲಿಕಾರರು ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸದೃಢಗೊಳಿಸಬೇಕು. ನೀವು ಕಡ್ಡಾಯವಾಗಿ ಮತ ಹಾಕುವುದರ ಜೊತೆಗೆ ನಿಮ್ಮ ಕುಟುಂಬ ಹಾಗೂ ನೆರೆ ಹೊರೆಯವರನ್ನು ತಪ್ಪದೇ ಮತದಾನ ಚಲಾಯಿಸುವಂತೆ ಪ್ರೇರೇಪಿಸಬೇಕು ಎಂದು ಕರೆ ನೀಡಿದರು.




ಮತ ಚಲಾಯಿಸುವ ಪ್ರತಿಯೊಬ್ಬ ನಾಗರಿಕನೂ ಸುಭದ್ರ ದೇಶ ನಿರ್ಮಿಸಲು ಕೊಡುಗೆ ನೀಡಿದಂತೆ. ಮತದಾನ ದಿನದಂದು ಯಾರೂ ಸಮಯ ವ್ಯರ್ಥ ಮಾಡದೆ ನಿಗದಿತ ದಾಖಲೆಗಳನ್ನು ತೆಗೆದುಕೊಂಡು ಹೋಗಿ ಮತ ಚಲಾಯಿಸಿ. ಬಿದರಹಳ್ಳಿ ಗ್ರಾ.ಪಂ ವ್ಯಾಪ್ತಿಯಲ್ಲಿ ಶೇ.100ರಷ್ಟು ಮತದಾನ ನಡೆಯಬೇಕು ಎಂದರು.

'ವಲಸೆ ಯಾಕ್ರೀ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ' ಅಭಿಯಾನ ಎರಡು ತಿಂಗಳುಗಳ ಕಾಲ ನಿರಂತರವಾಗಿ ನಡೆಯಲಿದೆ. ನಿಮ್ಮ ಗ್ರಾ.ಪಂ ವ್ಯಾಪ್ತಿಯಲ್ಲಿಯೇ ನಿಮಗೆ ಕೆಲಸ ನೀಡಲಾಗುತ್ತಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ನರೇಗಾ ಕೂಲಿ ಮೊತ್ತ ಈಗ 349 ರೂಪಾಯಿಗೆ ಏರಿಕೆಯಾಗಿದ್ದು, ಅಳತೆಗೆ ತಕ್ಕಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ. ಕೂಲಿ ಮೊತ್ತ ನೇರವಾಗಿ ನಿಮ್ಮ ಖಾತೆಗೆ ಜಮೆಯಾಗಲಿದೆ. ಇದರಿಂದ ಬೇಸಿಗೆ ಕಾಲದ ಒಕ್ಕಲುತನದ ವಿಷಮ ಪರಿಸ್ಥಿತಿಗಳನ್ನು ಎದುರಿಸಲು ಸಹಕಾರಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಪ್ರವೀಣ ಗೋಣೆಮ್ಮನವರ, ಗ್ರಾ.ಪಂ ಅಧ್ಯಕ್ಷೆ ಸುನೀತಾ ನಾಗಪ್ಪ ಹಾರೋಗೇರಿ, ಪಿಡಿಓ ಬಿ.ಕೆ. ಸಜ್ಜನಗೌಡರ, ಜಿ.ಪಂ ಎಡಿಪಿಸಿ ಕಿರಣ ಕುಮಾರ, ಡಿಐಇಸಿ ವಿ.ಎಸ್. ಸಜ್ಜನ, ತಾಲೂಕಾ ಸಂಯೋಜಕ ಹರೀಶ ಸೊಬರದ, ತಾಂತ್ರಿಕ ಸಹಾಯಕ ಅಂಜಿನಪ್ಪ ಸೇರಿದಂತೆ ತಾ.ಪಂ ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

### ವಿಭಿನ್ನ ಮತದಾನ ಜಾಗೃತಿ

ಲೋಕಸಭಾ ಸಾರ್ವತ್ರಿಕ ಚುನಾವಣೆ ನಿಮಿತ್ತ ಕಡ್ಡಾಯ ಮತದಾನದ ಜಾಗೃತಿಗಾಗಿ ಸಮುದಾಯ ಕಾಮಗಾರಿಯಲ್ಲಿ ಕಡೆದಿದ್ದ ಪಡಗಳಲ್ಲಿಯೇ ಬಣ್ಣದ ಅಕ್ಷರಗಳಿಂದ 'ನನ್ನ ಮತ ನನ್ನ ಹಕ್ಕು' ಎಂಬ ಘೋಷಣೆ ಬರೆದು ಜಾಗೃತಿ ಮೂಡಿಸಿದ್ದು ವಿಶೇಷವಾಗಿತ್ತು. ಇದೇ ವೇಳೆ ನರೇಗಾ ಹಾಗೂ ಮತದಾನದ ಘೋಷಣಾ ಪತ್ರಗಳನ್ನು ಹಿಡಿದ ಕೂಲಿಕಾರರು ಗಮನ ಸೆಳೆದರು. ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು.



## ಹಬ್ಬದ ಪ್ರಯುಕ್ತ ವಿಶೇಷ ಸಾರಿಗೆ ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಯುಗಾದಿ ಮತ್ತು ರಂಜಾನ್ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾಕರಸಾ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 185 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಏಪ್ರಿಲ್ 6 ಮತ್ತು ವಾರಾಂತ್ಯ ರಜೆ, ಏಪ್ರಿಲ್ 9ರಂದು ಯುಗಾದಿ ಮತ್ತು ಏಪ್ರಿಲ್ 11ರಂದು ರಂಜಾನ್ ಹಬ್ಬವಿರುವುದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ವಿಶೇಷ ಸಾರಿಗೆಗಳ ಸದುಪಯೋಗಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ನರೇಗಾ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಗದಗ

ಮೇ 7ರಂದು ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವುದು ಎಲ್ಲರ ಹಕ್ಕು ಮತ್ತು ಕರ್ತವ್ಯ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ಹೇಳಿದರು.

ಲಕ್ಕುಂಡಿ ಗ್ರಾಮದಲ್ಲಿ ಪ್ರಗತಿಯಲ್ಲಿರುವ ಬದು ನಿರ್ಮಾಣ ಕಾಮಗಾರಿ ವೀಕ್ಷಣೆ ಮಾಡಿ ಅವರು ಮಾತನಾಡಿದರು.

ಮತದಾನ ಮಾಡಿದಾಗ ಮಾತ್ರ ಪ್ರಜಾಪ್ರಭುತ್ವ ಗೆಲ್ಲಲು ಸಾಧ್ಯ. ಮೇ 7ರಂದು ಜರುಗುವ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶವನ್ನಾಗಿ ನಿರ್ಮಿಸೋಣ. ಮತದಾನ ದಿನದಂದು ನಾವು ಸಮಯ ವ್ಯರ್ಥ ಮಾಡದೆ ಚುನಾವಣೆ ಆಯೋಗ ನಿಗದಿಪಡಿಸಿದ ದಾಖಲೆಗಳನ್ನು ತೆಗೆದುಕೊಂಡು ಹೋಗಿ ಮತ ಚಲಾಯಿಸಬೇಕು. ಪ್ರತಿ ಗ್ರಾಮದಲ್ಲಿ ಶೇ.100ರಷ್ಟು ಮತದಾನ ಆಗಬೇಕು ಎಂದರು.



ಈ ಸಂದರ್ಭದಲ್ಲಿ ಹಾಜರಿದ್ದ ನರೇಗಾ ಕೂಲಿಕಾರರಿಗೆ ಸಹಾಯಕ ನಿರ್ದೇಶಕರು (ಗ್ರಾ.ಉ) ಕುಮಾರ್ ಪೂಜಾರ್ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ರಾಜಕುಮಾರ ಭಜಂತ್ರಿ, ನರೇಗಾ ಐ.ಇ.ಸಿ ಸಂಯೋಜಕ ವಿರೇಶ್, ಬಿಎಫ್‌ಟಿ ಸಿದ್ದು ಸೋಮನಕಟ್ಟಿ, ಗ್ರಾ.ಕಾ.ಮಿ ಅಕ್ಕಮಹಾದೇವಿ ಹಾಗೂ ನರೇಗಾ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ಮತ ಚಲಾಯಿಸಿ, ಪ್ರಜಾಪ್ರಭುತ್ವ ಬಲಪಡಿಸಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮತ ಚಲಾಯಿಸುವುದು ಪ್ರತಿಯೊಬ್ಬ ಪ್ರಜೆಯ ಆದ್ಯ ಕರ್ತವ್ಯ. ಅಲ್ಲದೆ ಮತ ಚಲಾಯಿಸಿದಾಗ ಮಾತ್ರ ಪ್ರಜಾಪ್ರಭುತ್ವ ಬಲಪಡಿಸಲು ಸಾಧ್ಯ ಎಂದು ಗೋವನಾಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜೆ.ಆರ್. ಕರುಬರು ಹೇಳಿದರು.

ಲಕ್ಷ್ಮೇಶ್ವರ ತಾಲೂಕಿನ ಗೋವನಾಳ ಗ್ರಾಮದ ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಮತದಾನ ಜನರ ಪ್ರಮುಖ ಹಕ್ಕು ಮತ್ತು ಕರ್ತವ್ಯವಾಗಿದೆ. ಮತದಾನ ಮತ್ತು ಚುನಾವಣೆ ಎರಡೂ ಒಂದೇ ನಾಣ್ಯದ ಎರಡು ಮುಖಗಳಾಗಿವೆ. ಚುನಾವಣೆಯ ಯಶಸ್ಸು ಮತದಾನವನ್ನು ಅವಲಂಬಿಸಿದೆ. ಆದ್ದರಿಂದ, ಎಲ್ಲ ಅರ್ಹ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಲು ಮನವಿ ಮಾಡಿದರು. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನ ನಿಗದಿಯಾಗಿದ್ದು, ಎಲ್ಲರೂ ಪ್ರಜಾಪ್ರಭುತ್ವದ ಮತದಾನದಲ್ಲಿ ಭಾಗಿಯಾಗುವಂತೆ ತಿಳಿಸಿದರು. ಈ ಬೇಸಿಗೆ ಅವಧಿಯಲ್ಲಿ ಹೆಚ್ಚು ಕೆಲಸ ಒದಗಿಸಲು ನರೇಗಾ ಯೋಜನೆಯಡಿ ಬದು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದ್ದು, ರೈತರು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು.

ಬಿಎಫ್‌ಟಿ ತೀರಕಪ್ಪ ಬಾಲೆಹೊಸೂರ ಮತದಾರರ ಪ್ರತಿಜ್ಞಾವಿಧಿ ಬೋಧಿಸಿದರು. ಡಿಇಒ ಶಿವಯೋಗಿ ಸೊರಟೂರ, ಮೌನೇಶ ಬಡಿಗೇರ, ಗ್ರಾ.ಪಂ ಸಿಬ್ಬಂದಿಗಳು, ನರೇಗಾ ಕಾಯಕ ಬಂಧುಗಳು, ಕೂಲಿ ಕಾರ್ಮಿಕರು ಇದ್ದರು.

## ಇಸ್ರೋ ವಿಜ್ಞಾನಿ ಆರ್.ವಿ. ನಾಡಗೌಡರರಿಂದ ವಿಶೇಷ ಉಪನ್ಯಾಸ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಏ.5ರ ಮಧ್ಯಾಹ್ನ 3 ಗಂಟೆಗೆ ನಾಗಾವಿಯ ವಿಶ್ವವಿದ್ಯಾಲಯ ಆವರಣದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಎಂ.ಎಸ್ಸಿ. ಜಿಯೋಇನ್ಫಾರ್ಮ್ಯಾಟಿಕ್ಸ್ ಹಾಗೂ ಕಂಪ್ಯೂಟರ್ ಸೈನ್ಸ್ (ಡೇಟಾ ಅನಲಿಟಿಕ್ಸ್) ವಿದ್ಯಾರ್ಥಿಗಳಿಗೆ 'ಇಸ್ರೋ ಗುರಿ ಹಾಗೂ ಸಾಮಾಜಿಕ ಪ್ರಯೋಜನಗಳು' (ಇಸ್ರೋ ಮಿಷನ್ ಆ್ಯಂಡ್ ಸೋಷಿಯಲ್ ಬೆನಿಫಿಟ್ಸ್) ಎಂಬ ವಿಷಯದ ಕುರಿತು ಇಸ್ರೋ ವಿಜ್ಞಾನಿ ಆರ್.ವಿ. ನಾಡಗೌಡರ ಇವರಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಆರ್.ವಿ. ನಾಡಗೌಡರ ಚಂದ್ರಯಾನ–2 ಯೋಜನೆಯಲ್ಲಿ ಲ್ಯಾಂಡರ್ ಸಂವೇದಕಗಳ ಕಾರ್ಯ ಪರೀಕ್ಷಾ ತಂಡದ ನಾಯಕರಾಗಿ, ಇಸ್ರೋದ ಚಿತ್ರದುರ್ಗದ ಸಮೀಪದಲ್ಲಿರುವ ಉಳ್ಳಾರ್ತಿ ಕಾವಲ್‌ನಲ್ಲಿರುವ ಜಾಗದಲ್ಲಿ ಚಂದ್ರನ ಮೇಲ್ಮೈಯಲ್ಲಿ ಇರುವ ಕುಳಿಗಳನ್ನು ಹೋಲುವ ಕುಳಿಗಳನ್ನು ಸೃಷ್ಟಿಸಿ, ಯಶಸ್ವಿಯಾಗಿ ಸಂವೇದಕಗಳ ಪರೀಕ್ಷೆಗಳನ್ನು ನಡೆಸಿದ್ದಾರೆ.

ಇಸ್ರೋದಿಂದ ತಯಾರಾಗುವ ಎಲ್ಲಾ ಉಪಗ್ರಹಗಳ ವಿನ್ಯಾಸ, ಜೋಡಣೆ, ಭೂ ಪರೀಕ್ಷೆ, ಸುರಕ್ಷಿತವಾಗಿ ಉಡಾವಣೆ ಕೇಂದ್ರಕ್ಕೆ ರವಾನೆ, ಉಡಾವಣಾ ಪೂರ್ವ ಪರೀಕ್ಷೆಗಳು ಹಾಗೂ ಉಡಾವಣೆಗೆ ಸಜ್ಜುಗೊಳಿಸಿ, ಉಡಾವಣೆ ಮಾಡಲು ಅನುಮತಿ ನೀಡುವವರೆಗಿನ ಎಲ್ಲಾ ಕಾರ್ಯಗಳು ಒಟ್ಟಾರೆಯಾಗಿ ಆರ್.ವಿ. ನಾಡಗೌಡರರ ಮೇಲ್ವಿಚಾರಣೆ ಹಾಗೂ ಜವಾಬ್ದಾರಿಯಲ್ಲಿ ನಡೆಯುತ್ತವೆ. ಹೀಗೆ ಚಂದ್ರಯಾನ–3 ಯೋಜನೆಯಲ್ಲಿ ಒಂದು ಗುಣಮಟ್ಟದ ನೌಕೆಯನ್ನು ತಯಾರಿಸಿ ಸುರಕ್ಷಿತವಾಗಿ ಹಾಗೂ ಮೃದುವಾಗಿ ಚಂದ್ರನ ಮೇಲೆ ಇಳಿಯುವಂತೆ ಮಾಡುವಲ್ಲಿ ನಾಡಗೌಡರ ಹಾಗೂ ಸುಮಾರು 250 ಜನರ ತಂಡದ ಪಾತ್ರ ಬಹುಮುಖ್ಯವಾಗಿದೆ.

## ಲೋಕಾಯುಕ್ತ ಜನ ಸಂಪರ್ಕ ಸಭೆ ಏ.10ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತದ ಅಪರ ಪೊಲೀಸ್ ಮಹಾ ನಿರ್ದೇಶಕರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ ಗದಗ ಕಛೇರಿಯ ಪೊಲೀಸ್ ಅಧಿಕಾರಿಗಳು ಏಪ್ರಿಲ್ 10ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮುಂಡರಗಿಯ ತಹಸೀಲ್ದಾರ ಕಛೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಈ ದಿನಾಂಕದಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಕರ್ನಾಟಕ ಲೋಕಾಯುಕ್ತ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಜಿಲ್ಲೆಯ ನರಗುಂದ ವಿಧಾನಸಭಾ ಕ್ಷೇತ್ರದ ಚುನಾವಣೆ ತರಬೇತಿ ಕೇಂದ್ರ ಹಾಗೂ ಕೊಣ್ಣೂರ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಎಅರ್‌ಒ, ತಹಸೀಲ್ದಾರ್, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಬಿಸಿಲಿಗೆ ಬಸವಳಿಯದಿರಲಿ ಬದುಕು

ಬೇಸಿಗೆಯ ಬಿರು ಬಿಸಿಲಿಗೆ ಇಡೀ ದೇಶವೇ ತತ್ತರಿಸಿದೆ. ಅದರಲ್ಲೂ ಕರ್ನಾಟಕದ ಉತ್ತರ ಭಾಗದ ಜಿಲ್ಲೆಗಳಲ್ಲಿ ಬಿಸಿಲು ಜನರ ಬದುಕನ್ನು ಹೈರಾಣಾಗಿಸಿದೆ. ಹಿಂದಿನ ವರ್ಷಗಳಿಗಿಂತ ಈ ಬಾರಿ ತಾಪಮಾನ ಹೆಚ್ಚಳವಾಗಿದೆ. ಆದರೆ ಅದರ ಜೊತೆ-ಗೆ ಬಿಸಿ ಗಾಳಿ ಬೀಸುತ್ತಿರುವುದು ಬೇಸಿಗೆಯನ್ನು ಮತ್ತಷ್ಟು ಅಸಹನೀಯವಾಗಿಸಿದೆ.

ಒಂದೆಡೆ ಬರ, ಮತ್ತೊಂದೆಡೆ ಬರದಿಂದಾಗಿ ನದಿ, ಹಳ್ಳ, ಕೆರೆ- ಕಟ್ಟೆಗಳು ಬತ್ತಿದ್ದು, ನೀರಿಗಾಗಿ ಹಾಹಾಕಾರ ಶುರುವಾಗಿದೆ. ಈಗಾಗಲೇ ಟ್ಯಾಂಕರ್ ಮೂಲಕ ನೀರು ಪೂರೈಕೆಯೂ ಆರಂಭವಾಗಿದೆ. ಜನಸಾಮಾನ್ಯರು ನೀರಿಗಾಗಿ ಬಿಸಿಲಿನಲ್ಲಿ ಹೈರಾಣಾಗಿದ್ದಾರೆ.

ಇದೆಲ್ಲದಕ್ಕಿಂತ ಹೆಚ್ಚಾಗಿ ಆರೋಗ್ಯ ಸಮಸ್ಯೆಗಳು ಶುರುವಾಗಿದೆ. ಮಕ್ಕಳು, ವೃದ್ಧರು ಬಿಸಿಲಿನಿಂದಾಗುವ ರೋಗಗಳಿಗೆ ಬಹುಬೇಗ ತುತ್ತಾಗುತ್ತಿದ್ದಾರೆ. ಅಷ್ಟೆ ಏಕೆ ಆರೋಗ್ಯವಂತ ಯುವಕ-ಯುವತಿಯರು ಅನೇಕ ರೀತಿಯ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ರಾಜ್ಯ ಸರ್ಕಾರ ಜನರ ಆರೋಗ್ಯ ರಕ್ಷಣೆಗಾಗಿ ಮಾರ್ಗಸೂಚಿಯನ್ನು ಪ್ರಕಟಿಸಿದೆ. ಅನೇಕ ಉಪಯುಕ್ತ ಸಲಹೆಗಳನ್ನು ಸರ್ಕಾರ ನೀಡಿದೆ. ಹೆಚ್ಚು ನೀರು ಕುಡಿಯುವುದು, ಹತ್ತಿ ಬಟ್ಟೆಗಳನ್ನ ಧರಿಸುವುದು, ಮಧ್ಯಾಹ್ನ ಬಿಸಿಲಿಗೆ ಹೋಗದಂತೆ ರಕ್ಷಣೆ ಪಡೆಯುವುದು, ಅನಾರೋಗ್ಯ ಲಕ್ಷಣಗಳು ಕಂಡು ಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಸೇರಿದಂತೆ ಅನೇಕ ಸಲಹೆಗಳನ್ನ ನೀಡಲಾಗಿದೆ.

ಸರ್ಕಾರದ ಮಾರ್ಗಸೂಚಿಯ ಅಂಶಗಳು ಎಲ್ಲರಿಗೂ ಗೊತ್ತಿರುವ ಸಂಗತಿ. ಆದರೆ ಅದನ್ನ ಪಾಲನೆ ಮಾಡಬೇಕಷ್ಟೆ. ಅದರಲ್ಲೂ ಬಿಸಿಲಲ್ಲಿ ಕೆಲಸ ಮಾಡುವ ಕಾರ್ಮಿಕರು ಈ ಮಾರ್ಗ ಸೂಚಿಯ ಬಗ್ಗೆ ಹೆಚ್ಚು ಗಮನ ಕೊಡಬೇಕು.

ಶ್ರಮಿಕ ವರ್ಗಕ್ಕೆ ದುಡಿಮೆ ಅನಿವಾರ್ಯ. ಆದರೆ ಕೆಲಸದ ಸಮಯವನ್ನ ಒಂದಷ್ಟು ಬದಲಾವಣೆ ಮಾಡಿಕೊಂಡು ಮುನ್ನಡೆದರೆ ಬಿಸಿಲಿನಿಂದ ಬದುಕನ್ನು ರಕ್ಷಿಸಿಕೊಳ್ಳಲು ಸಾಧ್ಯವಿದೆ. ಕೋವಿಡ್ ಸಂಕಷ್ಟದ ಸಮಯದಲ್ಲಿ ಮನೆಯಲ್ಲೆ ಇರಬೇಕಾದ ಅನಿವಾರ್ಯತೆಗಿಂತ ಸಮಯ ಹೊಂದಾಣಿಕೆ ಮೂಲಕ ಬಿಸಿಲಿನಿಂದ ಬದುಕು ರಕ್ಷಣೆ ಮಾಡಿಕೊಳ್ಳುವುದು ಒಳಿತು.

## ಸುಧಾರಣೆಗಳಿಗಾಗಿ ಎದುರು ನೋಡುತ್ತಿರುವ ತ್ರಿಕೂಟೇಶ್ವರ ದೇವಸ್ಥಾನ

# ಕೌತುಕದ ಸಮುಚ್ಚಯಕ್ಕೆ ಬೇಕು ಕಾಯಕಲ್ಪ

ಎರಡು ಸುತ್ತಿನ ಕೋಟೆಗಳ ಮಧ್ಯದಲ್ಲಿರುವ ಗದುಗಿನ ತ್ರಿಕೂಟೇಶ್ವರ ದೇವಾಲಯ ತನ್ನ ಕಲ್ಲಿನ ಕುಸುರಿ ಕೆತ್ತನೆಗಳಿಂದ, ಐತಿಹಾಸಿಕ ಸಂಗತಿಗಳಿಂದ, ವಿವಿಧ ದೇವರ ಮೂರ್ತಿಗಳಿಂದ ಹೀಗೆ ಹತ್ತು ಹಲವಾರು ಕೌತುಗಳನ್ನು ತನ್ನ ಒಡಲಲ್ಲಿ ಇಟ್ಟುಕೊಂಡು ದೇಶ-ವಿದೇಶಗಳಿಂದ ಪ್ರವಾಸಿಗರನ್ನು ಆಕರ್ಷಿಸುತ್ತದೆ.

ಮೂರು ಲಿಂಗಗಳು ಮೂರು ಕಡೆ ಸ್ಥಾಪನೆಗೊಂಡಿದ್ದು ಬಹಳ ಜನ ಗಮನಿಸುವುದಿಲ್ಲ. ಆಸಕ್ತರು ಈ ದೇವಸ್ಥಾನವನ್ನು ಒಳ್ಳೆಯ ಮಾರ್ಗದರ್ಶಕರ ಮಾರ್ಗದರ್ಶನದಲ್ಲಿ ಅಭ್ಯಸಿಸಿದರೆ ಮೂರು ದಿನಗಳೂ ಸಾಲುವುದಿಲ್ಲ. ಅಷ್ಟೊಂದು ವಿಷಯ ವ್ಯಾಪ್ತಿಯನ್ನು ಇಲ್ಲಿ ಕಾಣಬಹುದಾಗಿದೆ.

ನಂತರ ಬಂದ ಮಾಧವರಸನ ಆಳ್ವಿಕೆಯಲ್ಲಿ ಬೃಹತ್ ಸ್ವಯಂಭೂ ತ್ರಿಕೂಟೇಶ್ವರ, ಈಶ್ವರ ಅಶ್ವಶಾಲೆ, ಕೇಶವಾದಿತ್ಯ ಮುಂದಿನ ಸರಸ್ವತಿ ಮಂದಿರ, ಗಣಪತಿ ಮಂಟಪ ಮೊದಲಾದವು ನಿರ್ಮಾಣಗೊಂಡವು. ಇದಕ್ಕೆಲ್ಲ ಕ್ರಿಯಾಶಕ್ತಿ ಪಂಡಿತ ಹಾಗೂ ಅವನ ಶಿಷ್ಯ ಚಂದ್ರಭೂಷಣಮುನಿ ಇವರ ನೇತೃತ್ವ ಹಾಗೂ ಮಾರ್ಗದರ್ಶನ ಕಾರಣವಾಯಿತು. ಗದುಗಿನ ತೇರುಬೀದಿ ಪ್ರವೇಶದ್ವಾರದ ಇಕ್ಕೆಲಗಳಲ್ಲಿ ನಿರ್ಮಾಣಗೊಂಡ ಮಂಟಪ ಸಾಲು ಚಂದ್ರಸಾಲಿ ಎಂದು ಕರೆಯಲ್ಪಟ್ಟಿತು.



ಈ ಎಲ್ಲ ದೇವಸ್ಥಾನಗಳು ವಿಜಯನಗರ ಅರಸರ ಕಾಲದಲ್ಲಿ ಜೀರ್ಣೋದ್ಧಾರಗೊಂಡವು. ಗದುಗಿನ ಇಪ್ಪತ್ತು ದೇವಾಲಯಗಳು ಒಂದು ಮಠ ಹಾಗೂ ಒಂದು ಮಸೀದೆಯನ್ನೊಳಗೊಂಡು 1849ರಲ್ಲಿ ಪಂಚಟ್ರಸ್ಟ್ ಕಮಿಟಿ ನಿರ್ಮಾಣಗೊಂಡು, ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾಯಿತು. ತ್ರಿಕೂಟೇಶ್ವರ ದೇವಸ್ಥಾನದಲ್ಲಿಯೇ ಇದ್ದ ಪ್ರಾಚೀನ ಸೂರ್ಯನಾರಾಯಣ ಮೂರ್ತಿಯು ಭಗ್ನಗೊಂಡು ಮೂರ್ತಿ ಮುಂಬೈ ವಸ್ತು ಸಂಗ್ರಹಾಲಯ ಸೇರಿದಂತೆ, ಇಲ್ಲಿ ಕೆಳಗಿನ ಪೀಠ ಉಳಿದಿತ್ತು.

ತ್ರಿಕೂಟೇಶ್ವರ ದೇವಾಲಯದಲ್ಲಿ ಪಕ್ಕದ ದಾಸರ ಓಣಿಯ ಎಸ್.ಎಸ್.ಕೆ. ಕ್ಷತ್ರಿಯ ಸಮಾಜದ ಹ.ಭ.ಪ ಸಂತರಾದ ಶ್ರೀ ಷಣ್ಮುಖಸಾ ಶಿವಣಸಾ ಕಲಬುರ್ಗಿ ಅವರಿಗೆ 10 ಮಕ್ಕಳಲ್ಲಿ ಕಿರಿಯ ಮಗ ರಾಜಮಣಿ ಷಣ್ಮುಖಸಾ ಕಲಬುರ್ಗಿ 1962ರಲ್ಲಿ ದೊಡ್ಡ ನಂದಿ ವಿಗ್ರಹದ ಹಿಂದೆ ಸೂರ್ಯನಾರಾಯಣ ದೇವರ ಮೂರ್ತಿ ಇತ್ತು ಎಂದು ತಂದೆಯವರು ಹೇಳುತ್ತಿದ್ದರು.

1962ರಲ್ಲಿ ತಮ್ಮ 16ನೇ ವಯಸ್ಸಿನಲ್ಲಿ ರಾಜಮಣಿ ಅವರು ಭಗ್ನಗೊಂಡಿದ್ದ ಈ ಮೂರ್ತಿಯನ್ನು ಕಂಡು ಗದುಗಿನಲ್ಲಿ ಈ ಮೂರ್ತಿಯನ್ನು ಹೊಸದಾಗಿ ಸಿದ್ಧಪಡಿಸಿ ಸ್ಥಾಪಿಸಲು ಸಂಕಲ್ಪ ಮಾಡಿಕೊಂಡರು.

1997ರಲ್ಲಿ ದಿ. ಎಂ.ಎಚ್. ಹರಿದಾಸರು ಬರೆದ 'ಗದುಗಿನ ವೀರನಾರಾಯಣ' ಪುಸ್ತಕ ಹಾಗೂ 'ಗದುಗಿನ ತ್ರಿಕೂಟೇಶ್ವರ ದೇವಸ್ಥಾನ' ಎರಡೂ ಪುಸ್ತಕಗಳನ್ನು ಓದಿ 1100 ವರ್ಷಗಳ ಹಿಂದಿನ ಇತಿಹಾಸವನ್ನು ಅಧ್ಯಯನ ಮಾಡಿದರು. ಪ್ರಾಚ್ಯವಸ್ತು ಸಂಶೋಧಕರಾದ ಆ.ದ. ಕಟ್ಟಿಮನಿ ಅವರನ್ನು ಸಂಪರ್ಕಿಸಿ ಎಲ್ಲ ಮಾಹಿತಿ ಪಡೆದು, 2016ರಲ್ಲಿ ಗದುಗಿನ ವೀರನಾರಾಯಣ ಟ್ರಸ್ಟ್ ಕಮಿಟಿಗೆ ಅರ್ಜಿ ಸಲ್ಲಿಸಿದರು. ರಾಜಮಣಿ ಅವರು ತಮ್ಮ ತಂದೆಯ ಅಪೇಕ್ಷೆಯಂತೆ ಮೂರ್ತಿ ಪ್ರತಿಷ್ಠಾಪನೆ ಹೋಮ, ಹವನ, ಮಹಾಪ್ರಸಾದ ಈ ಕಾರ್ಯ ಮಾಡಲು ಕಮಿಟಿಯಿಂದ ಅನುಮತಿಯನ್ನು ಪಡೆದುಕೊಂಡರು.

ಈ ಮೂರ್ತಿ ಕೆತ್ತನೆ ಕಾರ್ಯ ಮುಗಿದ ಬಳಿಕ ಮೂರ್ತಿಯನ್ನು 2019ರಲ್ಲಿ ರಥಸಪ್ತಮಿಯಂದು ಶಾಸ್ತ್ರೋಕ್ತವಾಗಿ ಹ.ಭ.ಪ ಸಂತರಾದ ರಾಜಮಣಿ ಕಲಬುರ್ಗಿ ಹಾಗೂ ಸಮಸ್ಥ ಕಲಬುರ್ಗಿ ಪರಿವಾರ ಟ್ರಸ್ಟ್ ಕಮಿಟಿಯ ಪದಾಧಿಕಾರಿಗಳೊಂದಿಗೆ ವೇ. ಮೂ ರತ್ನಾಕರಭಟ್ ಜೋಶಿ ಅವರ ನೇತೃತ್ವದಲ್ಲಿ ಪ್ರತಿಷ್ಠಾಪಿಸಲಾಯಿತು. ಆದರೆ ಪ್ರತಿಷ್ಠಾಪನೆ ಮಾಡಿದ ಹ.ಭ.ಪ ಸಂತರಾದ ರಾಜಮಣಿ ಕಲಬುರ್ಗಿ ಅವರ ಹೆಸರು ದೇವಸ್ಥಾನದಲ್ಲಿ ಇಲ್ಲ. ಈಗಲಾದರೂ ಇವರ ಹೆಸರನ್ನು ಹಾಕುವಂತಾಗಬೇಕು.

ವಿಜಯಪುರ ಆದಿಲ್‌ಶಾಹಿ ಆಳ್ವಿಕೆಯಲ್ಲಿ ಎರಡನೆಯ ಸುತ್ತಿನ ಕೋಟೆಯು ಮಣ್ಣಿನಿಂದ ನಿರ್ಮಿಸಲ್ಪಟ್ಟಿತು. ಇದು ಕಿಲ್ಲೆ ಜೋಡಮಾರುತಿ ದೇವಸ್ಥಾನ. 1900ರಲ್ಲಿ ಲದವಾ ಮನೆತನದವರು ನಿರ್ಮಿಸಿದ ಗ್ರಾಮದೇವತೆಯ ದೇವಸ್ಥಾನ, ನರಗುಡಿಮನೆ, ಹಸಿರುಕೆರೆ ದಂಡೆ-ಯ ಮೇಲೆ ಪೂರ್ವಾಭಿಮುಖವಾಗಿ ಮಾರುತಿ, ಭಲ್ಲೇಶ್ವರ, ಲಕ್ಷ್ಮೀನಾರಾಯಣ ದೇವಸ್ಥಾನಗಳಿದ್ದು, ಕಿಲ್ಲೆಯ ಹೊರಗಡೆ ಭೀಷ್ಮಕೆರೆ, ಜಾಲಿಕೆರೆ, ಉಡಚಮ್ಮದೇವಿಯ ಗುಡಿ, ಜುಮ್ಮಾ ಮಸೀದಿ ಇನ್ನಿತರ ದೇವಸ್ಥಾನಗಳಿವೆ.

**– ಹ.ಭ.ಪ ಶ್ರೀ ರಾಜಮಣಿ ಶಿವಣಸಾ**
ಕಲಬುರ್ಗಿ. ದಾಸರ ಓಣಿ,
ಗದಗ.

ಕಲ್ಯಾಣ ಚಾಲುಕ್ಯರ ಮಾಂಡಲೀಕನಾಗಿದ್ದ ಶೋಭನರಸ ಗದಗನ್ನು ರಾಜಧಾನಿ ಮಾಡಿಕೊಂಡು, ರಂಗನವಾಡಾದಲ್ಲಿ ಅರಮನೆ ಕಟ್ಟಿಕೊಂಡು ಕ್ರಿ.ಶ.1002ರಿಂದ 1008ರವರೆಗೆ ಆಳ್ವಿಕೆ ಮಾಡಿದ ಬೆಳವಲ-300, ಪುಲಿಗೆರೆ-300, ಕುಕ್ಕನೂರ-30, ಕುಂದೂರ-1000 ಈ ಪ್ರಕಾರ ಅವನ ಪ್ರದೇಶ ವ್ಯಾಪ್ತಿಯಿತ್ತು. ಇವನು ಕ್ರಿ.ಶ.1002ರಲ್ಲಿ ಕಲ್ಲಿನ ಕರ್ದುಗೆ ಕೋಟೆ ನಿರ್ಮಿಸಿದ ಕೋಟೆಯ ಒಳಗೆ ಸ್ವಯಂಭೂ ಈಶ್ವರ ಹಾಗೂ ಸ್ವಯಂಭೂ ತ್ರಿಕೂಟೇಶ್ವರ ದೇವಸ್ಥಾನಗಳನ್ನು ಮೊದಲಿಗೆ ನಿರ್ಮಿಸಿದ. ಅಲ್ಲದೇ ವ್ಯಾಖ್ಯಾನ ಶಾಲೆಯನ್ನು ಕಟ್ಟಿಸಿ, ಕನ್ನಡ ಹಾಗೂ ಪ್ರಾಕೃತ ಬೋಧನೆಗಾಗಿ ಹೂಲಿಯಿಂದ ಕಾಳಜ್ಞಾನಿ ವಕ್ಕಾಣಜಿಯನ್ನು ಕರೆ ತಂದ. ಈ ಎಲ್ಲ ಕಟ್ಟಡಗಳು ಇಂದಿಗೂ ಸುಸ್ಥಿತಿಯಲ್ಲಿವೆ.

**ಈಗ ದೇವಸ್ಥಾನ ಸುಂದರಗೊಳಿಸುವ ಕಾಲ ಬಂದಿದೆ. ತ್ರಿಕೂಟೇಶ್ವರ ದೇವಸ್ಥಾನದಲ್ಲಿ ಈ ಕೆಳಗಿನ ಸುಧಾರಣೆಗಳ ಅಗತ್ಯವಿದೆ.**

* ತ್ರಿಕೂಟೇಶ್ವರ ದೇವಾಲಯ ಸಮುಚ್ಚಯದ ಕಟ್ಟಡಗಳ ದೊಡ್ಡ ಕಲ್ಲುಗಳು ಅಲ್ಲಲ್ಲಿ ಬಿದ್ದಿದ್ದು, ಆಯಾ ಕಟ್ಟಡಗಳಿಗೆ ಮರು ಜೋಡಿಸಬೇಕು.
* ದೇವಾಲಯದ ಆವರಣದಲ್ಲಿರುವ ಪುಷ್ಕರಣಿಯನ್ನು ಸ್ವಚ್ಛಗೊಳಿಸಿ, ಲಕ್ಕುಂಡಿ ಮುಸುಕಿನ ಬಾವಿಯ ಮಾದರಿಯಲ್ಲಿ ನವೀಕರಿಸಬೇಕು.
* ಪುಷ್ಕರಣಿ ಸುತ್ತಲೂ ಇರುವ ಪ್ರದೇಶದಲ್ಲಿ ಸುಂದರ ತೋಟ ನಿರ್ಮಾಣ ಮಾಡಬೇಕು.
* ಸಮುಚ್ಚಯದ ಪ್ರತಿಯೊಂದು ಗುಡಿಯ ಮುಂಭಾಗದಲ್ಲಿ ಗುಡಿಯ ಹೆಸರು, ಶಿಲ್ಪಿ, ನಿರ್ಮಾತೃ ಕಾಲ ಮೊದಲಾದ ಮಾಹಿತಿ ಇರಬೇಕು.
* ತ್ರಿಕೂಟೇಶ್ವರ ದೇವಸ್ಥಾನದಿಂದ ಹಸಿರುಕೆರೆಗೆ ಹೋಗಲು ಮೇಲ್ಸೇತುವೆ ನಿರ್ಮಿಸಿ, ದೀಪಾಲಂಕಾರ ಮಾಡಿ ಪ್ರವಾಸಿಗರನ್ನು ಆಕರ್ಷಿಸುವಂತಾಗಬೇಕು, ಹಸಿರು ಕೆರೆಯ ನೀರನ್ನು ಶುದ್ಧೀಕರಿಸಬೇಕು.
* ಹಸಿರು ಕೆರೆಯಲ್ಲಿ ಸ್ಥಗಿತಗೊಂಡಿರುವ ದಸರಾ ಸಂದರ್ಭದ ತೆಪ್ಪೋತ್ಸವ ನಿರಂತರವಾಗಿ ನಡೆಯುಂತಾಗಬೇಕು.
* ಕೆರೆಯ ಸುತ್ತ ಯಾತ್ರಾರ್ಥಿಗಳು ಕುಳಿತು ನೋಡಲು ಅವಕಾಶ ಕಲ್ಪಿಸಬೇಕು, ಗುಡಿಯ ಪ್ರಾಂಗಣದ ಹೊರಗೆ ಮೂತ್ರಾಲಯ, ಶೌಚಾಲಯ ಸೌಲಭ್ಯ ಕಲ್ಪಿಸಬೇಕು.
* ಈ ಮೊದಲು ವ್ಯಾಯಾಮ ಶಾಲೆಯ ಮಗ್ಗುಲಲ್ಲಿ ಒಂದು ಕಿರುದಾರಿಯಿತ್ತು. ಕಾಲಾಂತರದಲ್ಲಿ ಮುಚ್ಚಲಾಗಿದ್ದು, ಇಲ್ಲಿ ಹಲವು ಮೂರ್ತಿಗಳು ಹಾಗೂ ಶಾಸನಗಳಿವೆ. ಕಟ್ಟಡಕ್ಕೆ ಧಕ್ಕೆ ಮಾಡದೇ ದ್ವಾರ ತೆಗೆದು ಮಣ್ಣನ್ನು ತೆರವುಗೊಳಸಿ ಇಲ್ಲಿ ಸಂಶೋಧನೆ ಮಾಡುವ ಅವಶ್ಯಕತೆ ಇರುವುದಾಗಿ ಪ್ರಾಚ್ಯವಸ್ತು ಸಂಶೋಧಕರಾದ ಆ.ದ. ಕಟ್ಟಿಮನಿಯವರ ಅಭಿಪ್ರಾಯವಾಗಿದೆ.
* ದೇವಸ್ಥಾನ ಸಮುಚ್ಚಯ ಆವರಣದೊಳೆ ಸ್ವಚ್ಛತೆಯನ್ನು ಕಾಪಾಡಲು ಹಾಗೂ ಯಾವುದೇ ಅನೈತಿಕ ಚಟುವಟಿಕೆಗಳು ನಡೆಯದಂತೆ ಕಾವಲು ಇಡಬೇಕು.

## ಅಂಬಿಗ ಸಮುದಾಯಕ್ಕೆ ಸಹಾಯಧನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲೆಯ ಮೂಲ ಮೀನುಗಾರರಾದ ಅಂಬಿಗ ಸಮುದಾಯಕ್ಕೆ ಮನೆ ಕಟ್ಟಲು ಮತ್ಸ್ಯ ಆಶ್ರಯ ಯೋಜನೆ ಅಡಿ ವರ್ಷದ ಬಜೆಟ್ ಟಾರ್ಗೆಟ್ ಶೂನ್ಯ ಎಂದು ಅಂಬಿಗ ಸಮಾಜದ ಯುವ ಮುಖಂಡರು ಹಾಗೂ ರಾಷ್ಟ್ರೀಯ ಮೀನುಗಾರರ ಸಂಘದ ಗದಗ ತಾಲೂಕು ಘಟಕದ ಅಧ್ಯಕ್ಷ ಹರೀಶ ಬಾರಕೇರ ಬೇಸರ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಿಂದುಳಿದ ಜನ ಅಭಿವೃದ್ಧಿಯಾಗಲು ಸರ್ಕಾರದ ಯೋಜನೆಗಳು ಅಂಕಿ-ಸಂಖ್ಯೆಗಳಿಂದ ಹಂಚಿಕೆಯಾಗಬೇಕು. ಆದರೆ ಮೀನುಗಾರಿಕೆ ಇಲಾಖೆಯಲ್ಲಿ ಜಿಲ್ಲೆಗಳಿಗೆ ಅನುಗುಣವಾಗಿ ಮತ್ಸ್ಯ ಆಶ್ರಯ ಯೋಜನೆಯಡಿ ಸಹಾಯಧನ ನೀಡಿಲ್ಲ. ಗದಗ ಜಿಲ್ಲೆಯಲ್ಲಿ ಸಮುದಾಯದ ಜನ ಹೆಚ್ಚಾಗಿದ್ದರೂ ಇದ್ದರೂ ಶೂನ್ಯ ಬಜೆಟ್ ನೀಡಿರುವುದು ವಿಷಾದನೀಯ.

ಸಂಬಂಧಿಸಿದ ಇಲಾಖೆಯವರು, ಮೀನುಗಾರಿಕೆ ಸಚಿವರಾದ ಮಂಕಾಳು ವೈದ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದ್ದಾರೆ.

## ಪ್ರತಿದಿನ ಕ್ಷೇತ್ರದ ಜನರನ್ನು ಭೇಟಿಯಾಗಿ: ಎಎಪಿ ಶಾಸಕರಿಗೆ ಜೈಲಿನಿಂದ ಕೇಜ್ರಿವಾಲ್ ಸಂದೇಶ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ತಮ್ಮ ಕ್ಷೇತ್ರದ ಜನರನ್ನು ಭೇಟಿಯಾಗುವಂತೆ ಮತ್ತು ಜನರು ಯಾವುದೇ ಸಮಸ್ಯೆಗಳನ್ನು ಎದುರಿಸದಂತೆ ನೋಡಿಕೊಳ್ಳುವಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಂದೇಶವನ್ನು ಕಳುಹಿಸಿದ್ದು, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಪತ್ನಿ ಸುನೀತಾ ಕೇಜ್ರಿವಾಲ್ ಅವರು ಪತ್ರಿಕಾಗೋಷ್ಠಿಯಲ್ಲಿ ಸಂದೇಶವನ್ನು ಓದಿದ್ದಾರೆ.

ಅರವಿಂದ್ ಕೇಜ್ರಿವಾಲ್ ಅವರು ಎಲ್ಲಾ ಶಾಸಕರಿಗೆ ಸಂದೇಶವನ್ನು ಕಳುಹಿಸಿದ್ದಾರೆ, ಸಂದೇಶದಲ್ಲಿ ನಾನು ಜೈಲಿನಲ್ಲಿರುವ ಕಾರಣ, ದೆಹಲಿಯ ಜನರು ಯಾವುದೇ ರೀತಿಯಲ್ಲಿ ತೊಂದರೆ ಅನುಭವಿಸಬಾರದು. ಪ್ರತಿಯೊಬ್ಬ ಶಾಸಕರು ಪ್ರತಿದಿನ ತಮ್ಮ ಕ್ಷೇತ್ರಕ್ಕೆ ಭೇಟಿ ನೀಡಬೇಕು ಮತ್ತು ಜನರ ಸಮಸ್ಯೆಗಳನ್ನು ಚರ್ಚಿಸಿ ಅವುಗಳನ್ನು ಪರಿಹರಿಸಬೇಕು ಎಂದು ಹೇಳಿದ್ದಾರೆ ಎಂದು ಸುನೀತಾ ಕೇಜ್ರಿವಾಲ್ ಉಲ್ಲೇಖಿಸಿದ್ದಾರೆ.

ಎಎಪಿ ಸಂಸದ ಸಂಜಯ್ ಸಿಂಗ್ ಆರು ತಿಂಗಳ ನಂತರ ತಿಹಾರ್ ಜೈಲಿನಿಂದ ಬಿಡುಗಡೆಯಾಗಿದ್ದಾರೆ, ಈ ಬೆಳವಣಿಗೆ ಮಧ್ಯೆ ಪತ್ರಿಕಾಗೋಷ್ಠಿ ಹೊರಬಂದಿದ್ದು, ಸುನೀತಾ ಕೇಜ್ರಿವಾಲ್ ಅವರನ್ನು ರಾಷ್ಟ್ರ ರಾಜಧಾನಿಯ ಅವರ ನಿವಾಸದಲ್ಲಿ ಸಂಜಯ್ ಸಿಂಗ್ ಭೇಟಿಯಾಗಿದ್ದಾರೆ.

ಈಗ ರದ್ದುಗೊಂಡಿರುವ ದೆಹಲಿ ಅಬಕಾರಿ ನೀತಿಗೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ಅರವಿಂದ್ ಕೇಜ್ರಿವಾಲ್ ಅವರನ್ನು ಬಂಧಿಸಿದೆ. ಅವರಿಗೆ ಏಪ್ರಿಲ್ 15ರವರೆಗೆ ನ್ಯಾಯಾಂಗ ಬಂಧನ ವಿಧಿಸಲಾಗಿದ್ದು, ಅವರು ತಿಹಾರ್ ಜೈಲಿನಲ್ಲಿದ್ದಾರೆ. ಇತ್ತೀಚೆಗೆ ಇಂಡಿಯಾ ಮೈತ್ರಿಕೂಟದ ವತಿಯಿಂದ ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ್ದ ಸುನೀತಾ ಕೇಜ್ರಿವಾಲ್, ಕಳೆದ 75 ವರ್ಷಗಳಲ್ಲಿ ದೆಹಲಿಯ ಜನರು ಅನ್ಯಾಯವನ್ನು ಎದುರಿಸಿದ್ದಾರೆ. ಇಂಡಿಯಾ ಬಣ ಅಧಿಕಾರಕ್ಕೆ ಬಂದರೆ ನಾವು ದೆಹಲಿಯನ್ನು ಸಂಪೂರ್ಣ ರಾಜ್ಯವನ್ನಾಗಿ ಮಾಡುತ್ತೇವೆ. ನಿಮ್ಮ ಸ್ವಂತ ಅರವಿಂದ್ ಕೇಜ್ರಿವಾಲ್ ಜೈಲಿನಿಂದ ನಿಮಗಾಗಿ ಸಂದೇಶವನ್ನು ಕಳುಹಿಸಿದ್ದಾರೆ.

## ಪ್ರಧಾನಿ ಮೋದಿಯಂತ ನಾಯಕರು ದೇಶದಲ್ಲಿ ಮತ್ತೊಬ್ಬರಿಲ್ಲ-ಬಸವರಾಜ ಬೊಮ್ಮಾಯಿ

# ಲೋಕಸಭೆ ಚುನಾವಣೆ ನಂತರ ರಾಜ್ಯದಲ್ಲಿ ಮತ್ತೆ ಚುನಾವಣೆ ನಡೆದರೆ ಆಶ್ಚರ್ಯವಿಲ್ಲ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಲೋಕಸಭೆ ಚುನಾವಣೆ ನಂತರ ಮತ್ತೆ ರಾಜ್ಯದಲ್ಲಿ ಚುನಾವಣೆ ನಡೆದರೆ ಆಶ್ಚರ್ಯ ಪಡಬೇಕಿಲ್ಲ ಎಂದು ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಭವಿಷ್ಯ ನುಡಿದಿದ್ದಾರೆ.

ಗುರುವಾರ ಹಾನಗಲ್ ವಿಧಾನಸಭಾ ಕ್ಷೇತ್ರದ ಅಕ್ಕಿ ಆಲೂರಿನಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದ ಅವರು, ಲೋಕಸಭೆ ಚುನಾವಣೆಯ ನಂತರ ಕಾಂಗ್ರೆಸ್ ಇಬ್ಭಾಗವಾಗುತ್ತದೆ. ಭಾರತ ಸಾಕಷ್ಟು ಪ್ರಧಾನಿಗಳನ್ನು ಕಂಡಿದೆ ಆದರೆ, ನರೇಂದ್ರ ಮೋದಿಯವರಂತ ವ್ಯಕ್ತಿತ್ವ ನಮಗೆ ಸಿಕ್ಕಿಲ್ಲ, ಪ್ರಮಾಣಿಕತೆ, ಸಮಯ ಪ್ರಜ್ಞೆ, ದೇಶಭಕ್ತಿಯ ಸಂಸ್ಕಾರ ಮೋದಿಯವರಲ್ಲಿ ಇದೆ. ದೇಶಭಕ್ತಿಗೆ ಇನ್ನೊಂದು ಹೆಸರೆ ಮೋದಿಜೀ. ದೇಶದಲ್ಲಿ ಭಯೋತ್ಪಾದನೆ ನಡೆದರೆ ಮನಮೋಹನ ಸಿಂಗ್, ಪಾಕಿಸ್ತಾನಕ್ಕೆ ಪತ್ರ ಬರೆಯುತ್ತಿದ್ದರು, ಆದರೆ ಮೋದಿ, ಮಾತಲ್ಲ ಕೃತಿ ಮೂಲಕ ತಕ್ಕ ಉತ್ತರ ನೀಡಿದರು ಎಂದು ಹೇಳಿದರು.




ದೇಶದ ಬೆಳೆವಿಮೆ ನೇತಾರ ಸಿ.ಎಂ ಉದಾಸಿಯವರು, ಹಾವೇರಿ ಜಿಲ್ಲೆಯಲ್ಲಿ 480 ಕೋಟಿ ಬೆಳೆವಿಮೆ ಬಂದಿದೆ. ವಿಮೆ ಜಾರಿ ಮಾಡುವುದು ಮಾತ್ರವಲ್ಲ. ಯೋಜನೆಯನ್ನು ಜನರಿಗೆ ತಲುಪಿಸುವ ಕಾರ್ಯ ಮೋದಿ ಮಾಡುತ್ತಿದ್ದಾರೆ. ಪ್ರಧಾನಿಗಳಿಗೆ ಯೋಗ್ಯವ್ಯಕ್ತಿ ಮತ್ತೊಬ್ಬರಿಲ್ಲ. ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಖರ್ಗೆ ಪ್ರಧಾನಿಯಾಗಬೇಕು ಎನ್ನುತ್ತಿದ್ದರೆ, ಕರ್ನಾಟಕದ ಕಾಂಗ್ರೆಸ್ ನವರು, ರಾಹುಲ್ ಗಾಂಧಿ ಎನ್ನುತ್ತಿದ್ದಾರೆ. ಭಾರತಕ್ಕೆ 75 ವರ್ಷದ ನಂತರ ಇಂದು ಜಲಜೀವನ್ ಮಿಷನ್ ಮೂಲಕ ಇಂದು ಮನೆಗೆ ನೀರು ಬರುತ್ತಿದೆ. ಕಳೆದ ಹತ್ತು ವರ್ಷದಲ್ಲಿ 15 ಕೋಟಿ ಜನರನ್ನು ಬಡತನದಿಂದ ಹೊರಗೆ ಬಂದಿದ್ದಾರೆ ಎಂದು ಹೇಳಿದರು.

ಅಕ್ಕಿ ಆಲೂರು ಅಳಿಯ

ನಾನು ಅಕ್ಕಿಆಲೂರ ಅಳಿಯಾ, ಸೇವೆ ಮಾಡಿಸಿಕೊಳ್ಳುವ ಅಳಿಯ ಆಗುವುದಿಲ್ಲ. ಸೇವೆ ಮಾಡುವ ಅಳಿಯಾ ನಾನಾಗುತ್ತೇನೆ ಎಂದು ಹೇಳಿದರು.

ಮಾಜಿ ಸಚಿವ ಮನೋಹರ ತಹಶೀಲ್ದಾರ ಮಾತನಾಡಿ, ದಕ್ಷ ಮತ್ತು ಪ್ರಾಮಣಿಕ ಆಡಳಿತದ ಮೂಲಕ ದೇಶದ ಗಮನ ಸೆಳೆದಿರುವ ಬಸವರಾಜ್ ಬೊಮ್ಮಾಯಿಯವರ ಶಕ್ತಿ ಸಾಮರ್ಥ್ಯ ಗಮನಿಸಿರುವ ಹೈಕಮಾಂಡ್, ಕೇಂದ್ರಕ್ಕೆ ಆಹ್ವಾನಿಸಿದ್ದಾರೆ. ಜೀವನದ ಪ್ರತಿ ಹೆಜ್ಜೆ ಯಶಸ್ವಿಯ ಹಾದಿಯಲ್ಲಿರುವ [illegible] ಹಾವೇರಿಯಿಂದ ಲೋಕಸಭೆಗೆ ಪ್ರತಿನಿಧಿಸಿದರೆ ನಮ್ಮ ಪೀಳಿಗೆಯ ಭವಿಷ್ಯ ಉಜ್ವಲವಾಗುತ್ತದೆ. ನನ್ನ ಮತ್ತು ಸಿ.ಎಂ ಉದಾಸಿಯವರ ಮಧ್ಯೆ ಕಳೆದ 4 ದಶಕಗಳ ಕಾಲ ಅಭಿವೃದ್ಧಿಗಾಗಿ ತೀವ್ರ ಜಿದ್ದಾಜಿದ್ದಿ ಇತ್ತು, ಆದರೆ ಎಂದಿಗೂ ವೈಯಕ್ತಿಕವಾಗಿ ನಾವು ದ್ವೇಷಮಾಡಿಕೊಂಡಿಲ್ಲ. ನಮ್ಮನ್ನು ದ್ವೇಷಿಸುತ್ತಿದ್ದ ಪರಕೀಯರು ಭಾರತಕ್ಕೆ ಗೌರವ ಕೊಟ್ಟು ಹೆದರುವ ವಾತಾವರಣ ನಡುವೆ ನಿರ್ಮಾಣವಾಗಿದೆ ಎಂದರೆ ಕಾರಣ ನರೇಂದ್ರ ಮೋದಿಜಿಯವರು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಶಿವಯೋಗಿ ಹಿರೇಮಠ ಮತ್ತು ನಾಗೇಶ ಪಡೆಯಪ್ಪನವರ ಬಿಜೆಪಿಗೆ ಸೇರ್ಪಡೆಯಾದರು.

## ಸಿಎಂ ಹುದ್ದೆಯಿಂದ ಕೇಜ್ರಿವಾಲ್‌ನ್ನು ವಜಾ ಕೋರಿದ್ದ ಅರ್ಜಿ ತಿರಸ್ಕರಿಸಿದ ದೆಹಲಿ ಹೈಕೋರ್ಟ್



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅರವಿಂದ್ ಕೇಜ್ರಿವಾಲ್ ಅವರನ್ನು ದೆಹಲಿಯ ಮುಖ್ಯಮಂತ್ರಿ ಹುದ್ದೆಯಿಂದ ವಜಾಗೊಳಿಸುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಿಚಾರಣೆ ನಡೆಸಲು ದೆಹಲಿ ಹೈಕೋರ್ಟ್ ನಿರಾಕರಿಸಿದೆ.

ಕೇಜ್ರಿವಾಲ್ ಅವರು ಮದ್ಯ ನೀತಿ ಪ್ರಕರಣದಲ್ಲಿ 'ಇಡಿ' ಕಸ್ಟಡಿಯಲ್ಲಿರುವ ಕಾರಣ ಅವರನ್ನು ಸಿಎಂ ಸ್ಥಾನದಿಂದ ವಜಾಗೊಳಿಸುವಂತೆ ಕೋರಿ ಕಳೆದ ವಾರ ದೆಹಲಿ ಹೈಕೋರ್ಟ್‌ನಲ್ಲಿ ಹೊಸ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ಸಲ್ಲಿಸಲಾಗಿತ್ತು. ಹಿಂದೂ ಸೇನೆಯ ರಾಷ್ಟ್ರೀಯ ಅಧ್ಯಕ್ಷ ವಿಷ್ಣು ಗುಪ್ತಾ ಪಿಐಎಲ್ ಸಲ್ಲಿಸಿದ್ದರು.

ಹಂಗಾಮಿ ಮುಖ್ಯ ನ್ಯಾಯಮೂರ್ತಿ ಮನಮೋಹನ್ ಮತ್ತು ನ್ಯಾಯಮೂರ್ತಿ ಮನ್ಮೀತ್ ಪ್ರೀತಮ್ ಸಿಂಗ್ ಅರೋರಾ ಅವರ ವಿಭಾಗೀಯ ಪೀಠವು ಗುಪ್ತಾ ಅವರ ಅರ್ಜಿಯನ್ನು ವಜಾಗೊಳಿಸಿದೆ ಎಂದು ಬಾರ್ ಮತ್ತು ಬೆಂಚ್ ವರದಿ ಮಾಡಿದೆ. ಪೀಠವು "ಪ್ರಜಾಪ್ರಭುತ್ವವು ತನ್ನದೇ ಆದ ಹಾದಿಯನ್ನು ಹಿಡಿಯಲಿ" ಎಂದು ಹೇಳಿದೆ.




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಾಗಿರುವ ರವಿ ಎಲ್.ಗುಂಜೀಕರ ಅವರ ಜನ್ಮದಿನದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಓಬಿಸಿ ಇಲಾಖಾ ಹಾಗೂ ಗದಗ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖಾ ಸಿಬ್ಬಂದಿಗಳು ಸನ್ಮಾನಿಸಿ, ಗೌರವಿಸಿ ಶುಭ ಕೋರಿದರು.

ತಿರುಮಲಕೊಪ್ಪದ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ

# ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ತಾಲೂಕಿನ ತಿರುಮಲಕೊಪ್ಪ ಗ್ರಾಮದ (ತಡಸ್ ಕ್ರಾಸ್) ಶ್ರೀ ಜಗದ್ಗುರು ರೇಣುಕ ಧರ್ಮ ನಿವಾಸದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ, ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ಮತ್ತು ಜನಜಾಗೃತಿ ಧರ್ಮ ಸಮ್ಮೇಳನ ಏಪ್ರಿಲ್ 9ರ ಸಂಜೆ 6.30ಕ್ಕೆ ಜರುಗುವುದು.

ಅ.ಭಾ.ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮಾರಂಭವನ್ನು ಉದ್ಘಾಟಿಸುವರು. ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಸೂಡಿ

> ಸಮಾರಂಭಕ್ಕೂ ಮುನ್ನ ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ಜರುಗುವುದು. ಪ್ರಾತಃಕಾಲ ಜಂಗಮ ವಟುಗಳಿಗೆ ಶಿವದೀಕ್ಷೆ, ಅಯ್ಯಾಚಾರ ನಡೆಯುವುದು. ಶಿವದೀಕ್ಷಾ ಅಪೇಕ್ಷಿತರು ಹೆಸರನ್ನು ಮೊಬೈಲ್ ನಂ– 9980681109, 9945693405 ಹಾಗೂ 8904459341 ಮುಂಚಿತವಾಗಿ ಸಂಪರ್ಕಿಸಿ ನೋಂದಾಯಿಸಬೇಕು.

ಜುಕ್ತಿ ಹಿರೇಮಠದ ಡಾ.ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು, ಮಳಲಿ ಸಂಸ್ಥಾನ ಮಠದ ಡಾ. ಗುರುನಾಗಭೂಷಣ ಶಿವಾಚಾರ್ಯರು, ಬಂಕಾಪುರದ ರೇವಣಸಿದ್ಧ ಶಿವಾಚಾರ್ಯರು, ಶ್ರೀ ಜಗದ್ಗುರು ರೇಣುಕ ಧರ್ಮ ನಿವಾಸದ ದಾನಯ್ಯ ದೇವರು ಪಾಲ್ಗೊಂಡು ಉಪದೇಶಾಮೃತ ನೀಡುವರು.

ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಸಚಿವ ಸಂತೋಷ ಲಾಡ್, ಶಾಸಕ ಎಂ.ಆರ್. ಪಾಟೀಲ, ಮಾಜಿ ಸಚಿವ ಪಿ.ಸಿ. ಸಿದ್ಧನಗೌಡ್ರ, ಮಾಜಿ ಸಂಸದ ಎಂ.ಸಿ. ಕುನ್ನೂರು, ಮಾಜಿ ಶಾಸಕರಾದ ಕುಸುಮಾವತಿ ಶಿವಳ್ಳಿ, ಎಸ್.ಐ. ಚಿಕ್ಕನಗೌಡ್ರ, ಎಂ.ಎಸ್. ಅಕ್ಕಿ ಸೇರಿದಂತೆ ಹಲವಾರು ಗಣ್ಯಮಾನ್ಯರು ಆಗಮಿಸುವರು.

ಏಪ್ರಿಲ್ 8ರ ಸಂಜೆ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ದಾನಯ್ಯ ದೇವರು ನಡೆಸಿಕೊಂಡು ಬಂದ ಲಿಂ. ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಶಿವಾಚಾರ್ಯ ಭಗವತ್ಪಾದರ ಪುರಾಣ ಪ್ರವಚನ ಮಂಗಲ ಸಮಾರಂಭ ನಡೆಯಲಿದ್ದು, ಮುಕ್ತಿಮಂದಿರದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ವೀರಭದ್ರಯ್ಯ ಚಿಕ್ಕಮಠ, ನಿಂಗಪ್ಪ ಹೊರಟಿಣಿ, ಶಿದ್ಧಲಿಂಗಯ್ಯ ಪೂಜಾರ, ಗಂಗಯ್ಯ ಲೇಸಯ್ಯನವರಮಠ, ಡಾ. ನಿಂಗರಾಜ ಲಿಂಬಿಕಾಯಿ, ಶಶಿಧರ ಉಳ್ಳಾಗಡ್ಡಿಮಠ ಸೇರಿದಂತೆ ಅನೇಕ ಗಣ್ಯರು ಆಗಮಿಸುವರು. ಪ್ರಾತಃಕಾಲ ಲಿಂ.ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ಮಂಗಲ ಮೂರ್ತಿಗೆ ರುದ್ರಾಭಿಷೇಕ ನಡೆಯುವುದು.

ಏ. 10ರಂದು ಸಂಜೆ 4.30ಕ್ಕೆ ಪಾರ್ವತಿ ರಥೋತ್ಸವ ಹಾಗೂ ಕಡುಬಿನ ಕಾಳಗ ಜರುಗುವುದು. ಆಗಮಿಸಿದ ಸಕಲ ಭಕ್ತಾದಿಗಳಿಗೆ ಪ್ರಸಾದ ಸೇವೆಯನ್ನು ತಿರುಮಲಕೊಪ್ಪದ ಶಂಕರಗೌಡ ಪ.ಪಾಟೀಲ, ಬುಡರಶಿಂಗಿಯ ಈಶ್ವರಯ್ಯ ಚ.ಹಿರೇಮಠ, ಕುಂದಗೋಳದ ಮುತ್ತಣ್ಣ ತಡಸೂರ, ಕುಂದಗೋಳದ ಗಂಗಾಧರಯ್ಯ ನಾವಳ್ಳಿಮಠ, ಅಗಡಿ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ವಹಿಸಿಕೊಂಡಿದ್ದಾರೆ. ಈ ಎಲ್ಲ ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

'2024–25ನೇ ಸಾಲಿಗಾಗಿ ಶೈಕ್ಷಣಿಕ ಮುನ್ನೋಟ' ಕಾರ್ಯಾಗಾರದಲ್ಲಿ ಆರ್.ಎಸ್. ಬುರಡಿ

# ಸರಕಾರಿ ಶಾಲೆಗಳು ಸಬಲೀಕರಣಗೊಳ್ಳಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

'2024–25ನೇ ಸಾಲಿಗಾಗಿ ಶೈಕ್ಷಣಿಕ ಮುನ್ನೋಟ' ಎಂಬ ಶೈಕ್ಷಣಿಕ ಚಟುವಟಿಕೆಗಳ ಕುರಿತು ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಸರ್ಕಾರಿ ಶಾಲೆಗಳ ಸಬಲೀಕರಣಕ್ಕಾಗಿ ಇರುವ ಅವಕಾಶಗಳನ್ನು, ಆದ್ಯತೆಗಳ ಮೇರೆಗೆ ಬಳಸಿಕೊಂಡು ಸರಕಾರಿ ಪ್ರಾಥಮಿಕ ಶಾಲೆಗಳನ್ನು ಸರ್ವ ರೀತಿಯಿಂದಲೂ ಉನ್ನತೀಕರಿಸಲು ಮುಖ್ಯೋಪಾಧ್ಯಾಯರ ಕಾರ್ಯಾಗಾರವನ್ನು ಕ್ಷೇತ್ರ ಸಂಪನ್ಮೂಲ ಕೇಂದ್ರ ಶಹರ ವಲಯದಲ್ಲಿ ಆಯೋಜಿಸಲಾಗಿತ್ತು.



ಕಾರ್ಯಾಗಾರ ಉದ್ಘಾಟಿಸಿದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ್ ಪ್ರಾಥಮಿಕ ಶಾಲೆಗಳನ್ನು ಸಬಲೀಕರಣಗೊಳಿಸಲು ಇರುವ ಅವಕಾಶಗಳ ಕುರಿತು ಮುಕ್ತವಾಗಿ ಅಭಿಪ್ರಾಯ ಸಂಗ್ರಹಿಸಿದರು. ಈ ಹಿನ್ನೆಲೆಯಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ ಮುಖ್ಯೋಪಾಧ್ಯಾಯರು, ಸರಾಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವ ಪ್ರಯತ್ನವಾಗಬೇಕು. ಮಕ್ಕಳ ಹಾಜರಾತಿ, ಪ್ರತಿ ಶಾಲೆಯಲ್ಲಿ ಉತ್ತಮ ಕಲಿಕಾ ವಾತಾವರಣ ನಿರ್ಮಾಣ, ಮಗು ಕೇಂದ್ರಿತ ಬೋಧನೆ ಹಾಗೂ ನಾವೀನ್ಯಯುತ ಚಟುವಟಿಕೆಗಳ ಮೂಲಕ ಇನ್ನಷ್ಟು ಪರಿಣಾಮಕಾರಿಯಾಗಿರುವ ಕಲಿಕಾ ವಾತಾವರಣದಲ್ಲಿ ಪ್ರತಿ ಮಗುವಿನ ಕೃತಿ ಸಂಪುಟವನ್ನು ನಿಖರವಾದ ದಾಖಲೆಗಳೊಂದಿಗೆ ನಿರ್ವಹಿಸುವುದು, ಕನ್ನಡ ಸೇರಿದಂತೆ ಇಂಗ್ಲಿಷ್ ಭಾಷಾ ಕಲಿಕೆಯನ್ನು ವ್ಯವಸ್ಥಿತಗೊಳಿಸಿ ವರ್ಗಕೋಣೆಯಲ್ಲಿ ತಂತ್ರಜ್ಞಾನದೊಂದಿಗೆ ಲಭ್ಯವಿರುವ ವಿವಿಧ ಬೋಧನಾ ಕಲಿಕೋಪಕರಣಗಳನ್ನು ಸಮಯೋಚಿತವಾಗಿ ಬಳಸಿಕೊಂಡು, ಸಮುದಾಯ ಹಾಗೂ ಇಲಾಖೆಯ ಬೆಂಬಲದೊಂದಿಗೆ ಶಿಕ್ಷಕರೆಲ್ಲರೂ ತಂಡವಾಗಿ ಕಾರ್ಯ ನಿರ್ವಸುವ ಮೂಲಕ ಸರಕಾರಿ ಶಾಲೆಗಳನ್ನು ಮತ್ತಷ್ಟು ಸಬಲೀಕರಗೊಳಿಸಬಹುದು ಎಂದು ಅಭಿಪ್ರಾಯ ತಿಳಿಸಿದರು. ಈ ಅಂಶಗಳ ಕುರಿತು ಉಪನಿರ್ದೇಶಕರು ಎಲ್ಲಾ ಮುಖ್ಯೋಪಾಧ್ಯಾಯರಿಗೆ ಮಾರ್ಗದರ್ಶನ ಮಾಡಿದರು.

ಕಾರ್ಯಗಾರದ ಅಧ್ಯಕ್ಷತೆ ವಹಿಸಿದ್ದ ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ಈಗಾಗಲೇ ವಲಯದಲ್ಲಿ ಕೈಗೊಂಡ ಭೌತಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಯ ಪ್ರಯತ್ನದೊಂದಿಗೆ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಸುಧಾರಣೆಗಳ ಕುರಿತು ಮುನ್ನೋಟ 2024–25ರ ಕಾರ್ಯಸೂಚಿಯನ್ನು ಮಂಡಿಸಿದರು. ಪ್ರತಿ ಶಾಲಾ ಹಂತದಲ್ಲಿ ಶಿಕ್ಷಕರು ಇದುವರೆಗಿನ ಪ್ರಯತ್ನಗಳ ಜೊತೆಗೆ ಶಾಲೆಯೊಳಗಿನ

> ಗದಗ ಶಹರ ವಲಯದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್. ಕೆ. ಮಂಗಳಗುಡ್ಡ, ಉಪಾಧ್ಯಕ್ಷೆ ಆರ್.ಬಿ. ಸಂಕಣ್ಣವರ ಸಂಯುಕ್ತವಾಗಿ ಎಲ್ಲಾ ಮುಖ್ಯ ಶಿಕ್ಷಕರಿಗೆ ಒಂದು ದಿನಚರಿ ಪುಸ್ತಕ ನೀಡುವುದರ ಜೊತೆಗೆ ಇಲಾಖೆ ಹಾಗೂ ಶಿಕ್ಷಕರ ಸಂಘದ ನಡುವೆ ಶೈಕ್ಷಣಿಕ ಸಮನ್ವಯತೆ ಸದಾಕಾಲ ಇರುತ್ತದೆಂದರು.

ಹಾಗೂ ಹೊರಗಿನ ಕಲಿಕಾ ವಾತವರಣ ಪರಿಣಾಮಕಾರಿಯಾದ, ಪೂರ್ವಸಿದ್ಧತೆಯಿಂದ ಕೂಡಿದ ನವೀನ ಚಟುವಟಿಕೆಯುಳ್ಳ ಕಲಿಕಾ ಪ್ರಯತ್ನಗಳಿಂದ ನಿರಂತರ ಹಾಗೂ ವ್ಯಾಪಕ ಮೌಲ್ಯಮಾಪನದೊಂದಿಗೆ ಸಮುದಾಯದ ಸಹಭಾಗಿತ್ವ ಹಾಗೂ ಇಲಾಖೆಯ ಶೈಕ್ಷಣಿಕ ಬೆಂಬಲ ವ್ಯವಸ್ಥೆಯ ಪೂರ್ಣ ಸಹಕಾರ ಪಡೆದು ಹಂತ ಹಂತವಾಗಿ ಸರಕಾರಿ ಶಾಲೆಗಳನ್ನು ಸಬಲೀಕರಣಗೊಳಿಸಬಹುದಾಗಿದ್ದು, ಇಂತಹ ಶಕ್ತಿ ಹಾಗೂ ಸಾಮರ್ಥ್ಯ ನಿಮ್ಮೆಲ್ಲರಲ್ಲಿದೆ ಎಂಬ ಆಶಾಭಾವದೊಂದಿಗೆ ದಾಪುಗಾಲನ್ನು ಇಡೋಣ ಎಂದು ಪ್ರೇರೇಪಿಸಿದರು.

ಕಾರ್ಯಾಗಾರದಲ್ಲಿ ಉಪ ಯೋಜನಾ ಸಮನ್ವಯಾಧಿಕಾರಿ ಎಂ.ಎಚ್. ಕಂಬಳಿ, ಕ್ಷೇತ್ರ ಸಮನ್ವಯಾಧಿಕಾರಿ ಎಚ್.ಎ. ಫಾರೂಖಿ, ಶಹರ ವಲಯದ ಎಲ್ಲ ಸಿ.ಆರ್.ಪಿ, ಬಿ.ಆರ್.ಪಿ, ಇ.ಸಿ.ಓ, ಬಿ.ಐ.ಇ.ಆರ್.ಟಿ, ಪಿ.ಇ.ಓ ಉಪಸ್ಥಿತರಿದ್ದರು.

# ಶರಣಬಸವೇಶ್ವರ ಜಾತ್ರಾ ಮಹೋತ್ಸವಕ್ಕೆ ತೆರೆ



**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಇಲ್ಲಿನ ಶರಣಬಸವೇಶ್ವರ ಜಾತ್ರಾ ಮಹೊತ್ಸವದ ಕೊನೆಯ ದಿನ ಮುಶಿಗೇರಿ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು ರಸಮಂಜರಿಯಲ್ಲಿ ಉತ್ಸಾಹದಿಂದ ಸಂಭ್ರಮಿಸಿ, ಕುಣಿದು ಕುಪ್ಪಳಿಸಿದರು. ತಾರಾ ಕಲಾವಿದರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಹೆಜ್ಜೆ ಹಾಕಿ ಬುಧವಾರ ಬೆಳಗಿನ ಜಾವದ ತನಕವೂ ಸಂಭ್ರಮ ಪಟ್ಟರು.

ಕಲಾಸಿಂಚನ ಮೆಲೋಡಿಸ್ ಕಲಾ ತಂಡದಿಂದ ಹಾಸ್ಯ ಸಂಗೀತ ಸಿಂಚನ, ಸಾಂಸ್ಕೃತಿಕ ಕಾರ್ಯಕ್ರಮ ಸಂಭ್ರಮದ ಮೂಲಕ ಜಾತ್ರಾ ಮಹೋತ್ಸಕ್ಕೆ ವರ್ಣರಂಜಿತವಾಗಿ ತೆರೆಬಿದ್ದಿತು. ಹೆಸರಾಂತ ಕಲಾವಿದ ಗೋಪಾಲ ಹೂಗಾರ, ಗೋಪಾಲ ಇಂಚಗೇರಿ, ಸುರೇಶ ಇಂಚಗೇರಿ, ಮಾಲಾಶ್ರೀ ಗವನಾಳೆ, ಡಿಕೆಡಿ ಪೂಜಾ, ಪ್ರಿಯಾ ಹಾಗೂ ಅಂಕಿತಾ ತಂಡದವರು ನಡೆಸಿಕೊಟ್ಟ ಸಂಗೀತ ಕಾರ್ಯಕ್ರಮಕ್ಕೆ ಜನ ಮನಸೋತರು.

ರಜಮಂಜರಿ ಕಾರ್ಯಕ್ರಮವನ್ನು ಗ್ರಾ.ಪಂ ಅಧ್ಯಕ್ಷ ರಾಜಶೇಖರ ಮಾಲಗಿತ್ತಿ ಉದ್ಘಾಟಿಸಿದರು. ಪ್ಯಾಟಿಯ ಧರ್ಮರ ಮಠದ ಸಂಕ್ರಪ್ಪಜ್ಜನವರು ಸಾನಿಧ್ಯ ವಹಿಸಿದ್ದರು. ಗ್ರಾ.ಪಂ ಮಾಜಿ ಉಪಾಧ್ಯಕ್ಷ ಚಂದಪ್ಪ ಗುಡದೂರ, ಅವಿನಾಶ ಸಾಲಮನಿ, ಹಣಮಂತ ಬೇವಿನಮರದ, ಮೌನೇಶ ಅಕ್ಕಸಾಲಿಗರ, ಚಂದ್ರಶೇಖರ ಬೆವಿನಮರದ, ಬಸವರಾಜ ಕೌಜಗೇರಿ, ಮಲ್ಲಿಕಾರ್ಜುನ ಬೇವಿನಮರದ, ಮಹೇಶ ಮೇಟಿ, ರಾಘು ಪತ್ತಾರ, ಪ್ರವೀಣ ಕರ್ಣಿ, ಬಸವರಾಜ ಗುಡದೂರ, ಅಂದಪ್ಪ ಹಾಲಕೇರಿ, ಅಂದಪ್ಪ ತೊಂಡಿಹಾಳ, ಈರಣ್ಣ ಸೂಡಿ, ಶರಣಪ್ಪ ದೊಡ್ಡಮನಿ ಇದ್ದರು.

ಕಳಸಾಪೂರದ ಈಶ್ವರ, ಬಸವಣ್ಣ ದೇವರ 14ನೇ ವರ್ಷದ ಜಾತ್ರಾ ಮಹೋತ್ಸವ ಇಂದಿನಿಂದ

## ಸಾಮೂಹಿಕ ವಿವಾಹ, ಸಾಧಕರಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಕಳಸಾಪುರ ಸುಕ್ಷೇತ್ರದ ಶ್ರೀ ಈಶ್ವರ ಬಸವಣ್ಣ ದೇವರ ಜಾತ್ರಾ ಮಹೋತ್ಸವದ ರೂವಾರಿ ಲಿಂ. ಶ್ರೀಪಾದಯ್ಯ ಇಟಗಿಮಠ ಅವರ ಸ್ಮರಣೆಯಲ್ಲಿ ಸುಕ್ಷೇತ್ರದ ಶ್ರೀ ಈಶ್ವರ, ಬಸವಣ್ಣ ದೇವರ 14ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮಗಳು ಏ.5ರಿಂದ 10ರವರೆಗೆ ಜರುಗಲಿವೆ. ಏ.9ರಂದು ಮುಂಜಾನೆ 11.30ಕ್ಕೆ ಸಾಮೂಹಿಕ ವಿವಾಹ ಮತ್ತು ಸಂಜೆ 5.30 ಗಂಟೆಗೆ ಮಹಾರಥೋತ್ಸವ ಜರುಗುವುದು.

> ಯುವ ಮುಖಂಡರಾದ ಕೃಷ್ಣಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸುವವರು. ಯುವ ಮುಖಂಡ ಶರಣ ಪಾಟೀಲ, ಕಿರಣ ಭೂಮಾ ಉಪಸ್ಥಿತರಿರುವರು. 'ಹನಿ ಸಂಜೀವಿನಿ' ಪುಸ್ತಕವನ್ನು ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಬಿಡುಗಡೆಗೊಳಿಸುವರು. ಶರಣ ಶಿವಲಿಂಗಯ್ಯ ಸ್ವಾಮಿಗಳು ಹಿರೇಮಠ ಸಿದ್ದಾಪುರ ಅವರು ಪ್ರವಚನಮಂಗಲ ನುಡಿ ಆಡುವರು. ಕಲ್ಬುರ್ಗಿಯ ಸಂಗಮೇಶ ಗವಾಯಿಗಳು ಪಾಟೀಲ ಸಂಗೀತ ಸೇವೆ ನೀಡುವರು. ಕರಡಕಲ್ ತೋಟೇಂದ್ರಕುಮಾರ ತಬಲ ಸಾಥ್ ನೀಡುವರು.

ಏ.5ರಂದು ಬೆಳಗ್ಗೆ ಓಂಕಾರಗಿರಿ ಓಂಕಾರೇಶ್ವರ ಮಠದ ಪೂಜ್ಯಶ್ರೀ ಫಕ್ಕೀರೇಶ್ವರ ಶಿವಾಚಾರ್ಯ ಸ್ವಾಮಿಗಳ ಅಮೃತ ಹಸ್ತದಿಂದ ಕಳಸಾರೋಹಣ ಜರಗುವುದು. ಸಂಜೆ 7 ಗಂಟೆಗೆ ಶಿವಶರಣೆ ಗುಡ್ಡಾಪುರ ದಾನಮ್ಮ ದೇವಿ ಪುರಾಣ ಪ್ರವಚನ ಮಂಗಲೋತ್ಸವ ಹಾಗೂ ಸಾಧಕರಿಗೆ ಪ್ರಶಸ್ತಿ ಪುರಸ್ಕಾರ ಸಮಾರಂಭ ಜರುಗಲಿದೆ. ಗದುಗಿನ ತೋಂಟದ ಶ್ರೀಮಠದ ಪೂಜ್ಯಶ್ರೀ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ದಿವ್ಯಸಾನಿಧ್ಯ ವಹಿಸುವರು. ಅಡ್ನೂರ–ರಾಜೂರ– ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸುವರು. ದಿ. ಗದಗ ಕೋ ಆಪ್ ಇಂಡಸ್ಟ್ರಿಯಲ್ ಎಸ್ಟೇಟ್ ಲಿ.ನ ಉಪಾಧ್ಯಕ್ಷ ಪ್ರಭಯ್ಯ ದಂಡಾವತಿಮಠ ಅಧ್ಯಕ್ಷತೆ ವಹಿಸುವರು.

ಇದೇ ಸಂದರ್ಭದಲ್ಲಿ ಸಾಧಕರಾದ ಶರದರಾವ್ ಹುಯಿಲಗೋಳ (ಕೃಷಿ ಮತ್ತು ಧರ್ಮಕಾರ್ಯ), ಮಾರುತಿ ಜಾದವ್ (ಕೃಷಿ), ಬಿ.ಆರ್. ದೇವರೆಡ್ಡಿ (ಸಮಾಜಸೇವೆ), ಶರಣಪ್ಪ ಕಡಬಲಕಟ್ಟಿ(ಸಮಾಜಸೇವೆ), ಸಾಧಿಕ್‌ಸಾಬ್ ನರಗುಂದ (ಸಮಾಜಸೇವೆ), ಶರೀಫಸಾಬ್ ಡಾಲಾಯತ (ಸಮಾಜಸೇವೆ), ವಿ.ವಿ. ಹಿರೇಮಠ (ಸಮಾಜಸೇವೆ), ಪಕ್ಕೀರಸಾ ಬಾಂಡಗೆ (ಉದ್ಯಮ), ಸದಾಶಿವಯ್ಯ ಮದರಿಮಠ (ಉದ್ಯಮ), ಬಾಳು ಪಾಟೀಲ(ಉದ್ಯಮ), ರಫೀಕಸಾಬ್ ತೋರಗಲ್(ಉದ್ಯಮ), ಸುರೇಶ ಚವ್ಹಾಣ(ಉದ್ಯಮ), ಸಂಜೀವಕುಮಾರ ಶಿಂಥರ(ಕಂದಾಯ ಇಲಾಖೆ), ಚಂದ್ರಶೇಖ ಬಂಡಿವಡ್ಡರ(ಪೊಲೀಸ್ ಇಲಾಖೆ), ಸಂತೋಷಕುಮಾರ ಪಾಟೀಲ(ಪಿಆರ್‌ಡಿ ಇಲಾಖೆ), ಸಂಜೀವ ಪೂಜಾರಿ(ಸಾಹಿತ್ಯ), ರಾಹುಲ್ ಸಿದ್ದಮ್ಮನಹಳ್ಳಿ(ಕ್ರೀಡೆ), ಜಾಹ್ನವಿ ಕುರುಗೋಡ(ಕ್ರೀಡೆ) ಅವರಿಗೆ ಪ್ರಶಸ್ತಿ ನೀಡಲಾಗುವುದು. ಪತ್ರಕರ್ತರಾದ ಆನಂದಯ್ಯ ವಿರಕ್ತಮಠ ಸಭೆಯನ್ನು ನಿರೂಪಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಜ್ಯೋತಿ ಮಿರ್ಧಾ ವಿರುದ್ಧ ಕ್ರಮಕ್ಕೆ ದಲಿತ ಸಂಘಟನೆಗಳ ಆಗ್ರಹ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಂವಿಧಾನ ತಿದ್ದುಪಡಿ ಬಗ್ಗೆ ರಾಜಸ್ಥಾನ ಬಿಜೆಪಿ ನಾಯಕಿ ಜ್ಯೋತಿ ಮಿರ್ಧಾ ಹೇಳಿಕೆ ಖಂಡಿಸಿ ಗದುಗಿನಲ್ಲಿ ವಿವಿಧ ದಲಿತ ಸಂಘಟನೆಗಳಿಂದ ಮನವಿ ಸಲ್ಲಿಸಲಾಯಿತು. ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ದಲಿತ ಸಂಘಟನೆಗಳ ಅನೇಕ ಕಾರ್ಯಕರ್ತರು ಗದಗ ತಹಸೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾ ಆಯೋಗದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಜೈಭೀಮ್ ಸೇನೆಯ ರಾಜ್ಯ ಉಪಾಧ್ಯಕ್ಷ ಮೈಲಾರಪ್ಪ ಚಳ್ಳಮರದ ಮಾತನಾಡಿ, ರಾಜಸ್ಥಾನ ರಾಜ್ಯದ ನಾಗೋರ್ ಕ್ಷೇತ್ರದ ಲೋಕಸಭಾ ಬಿಜೆಪಿ ಅಭ್ಯರ್ಥಿ ಜ್ಯೋತಿ ಮಿರ್ಧಾ ಸಂವಿಧಾನ ತಿದ್ದುಪಡಿ ಬಗ್ಗೆ ನಾಲಿಗೆ ಹರಿಬಿಟ್ಟಿದ್ದಾರೆ. ಸಂವಿಧಾನ ಬಗ್ಗೆ ಹಗುರವಾಗಿ ಮಾತನಾಡಿದ ಅವರ ಮೇಲೆ ಕಠಣ ಕ್ರಮ ಜರುಗಿಸಬೇಕು. ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಜೈಭೀಮ್ ಸೇನೆ ರಾಜ್ಯ ಉಪಾಧ್ಯಕ್ಷ ಮೈಲಾರಪ್ಪ ವಿ.ಚಳ್ಳಮರದ, ಅಧ್ಯಕ್ಷ ವಿಜಯ್ ಕಲ್ಮನಿ, ಅಂಜುಮನ್ ಕಮಿಟಿ ಅಧ್ಯಕ್ಷ ಯೂಸುಫ್ ನಮಾಜಿ, ಪ್ರಮುಖರಾದ ಮಲ್ಲಿಕಾರ್ಜುನ ಸಮನಗಾಪೂರ, ಹನುಮಂತ ಪೂಜಾರ, ಸೋಮು ನಾಗರಾಜ್, ಮಾರುತಿ ಹಾದಿಮನಿ, ಬಸವರಾಜ್ ಮನಗುಂಡಿ, ವಿಶಾಲ್, ರಫಿಕ್ ಜಮಾಲಖಾನ್, ಮಹಾಂತೇಶ್ ಬೆಳಧಡಿ, ಹನುಮಂತ ರಾಂಪೂರ, ಯುವರಾಜ್ ಹಾದಿಮನಿ, ಶ್ರೀಕಾಂತ್ ಮೂಲಿಮನಿ, ಮಂಜುನಾಥ ಹಳ್ಳದಮನಿ, ರವಿ ಹಳ್ಳದಮನಿ, ಗಂಗಾಧರ್ ಬ್ಯಾಗೋಟಿ, ಈರಣ್ಣ ಗೆಜ್ಜಿಹಳ್ಳಿ, ರಾಘವೇಂದ್ರ ಗೆಜ್ಜೆಹಳ್ಳಿ, ಮಂಜುನಾಥ ಅಗಸಿಮನಿ, ಅಶೋಕ ಹಾದಿಮನಿ, ಮಹಾದೇವ ಛಲವಾದಿ, ಮೋಹನ್ ಛಲವಾದಿ, ಮಂಜುನಾಥ ಕೊರಗಲ್, ಬಸವರಾಜ್, ದುರಗಪ್ಪ ಮಾದರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶ್ರೀ ಸ್ವಯಂಭು ಸೋಮೇಶ್ವರ ಮಾಂಗಲ್ಯ ಮಂದಿರ ಉದ್ಘಾಟಿಸಿದ ರಂಭಾಪುರಿ ಶ್ರೀಗಳು

# ಶ್ರಮ ಪಡದ ಸಂಪತ್ತು ಶಾಶ್ವತವಲ್ಲ

**■ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು**

ವೀರಶೈವ ಧರ್ಮದಲ್ಲಿ ಕಾಯಕ ಧರ್ಮಕ್ಕೆ ಬಹಳಷ್ಟು ಪ್ರಾಮುಖ್ಯತೆ ಕೊಟ್ಟಿದ್ದಾರೆ. ಕ್ರಿಯಾಶೀಲ ಬದುಕು ಶ್ರೇಯಸ್ಸಿಗೆ ಮೂಲ. ಸಮುದಾಯದ ಅಭಿವೃದ್ಧಿಗೆ ರಚನಾತ್ಮಕ ಕಾರ್ಯಗಳನ್ನು ಕೈಗೊಳ್ಳಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಲಿಂಗದಹಳ್ಳಿ ಹಿರೇಮಠದಲ್ಲಿ ನಿರ್ಮಿಸಿದ ಶ್ರೀ ಸ್ವಯಂಭು ಸೋಮೇಶ್ವರ ಮಾಂಗಲ್ಯ ಮಂದಿರ ಉದ್ಘಾಟಿಸಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಆಶೀರ್ವಚನ ನೀಡುತ್ತಿದ್ದರು.

ಭಗವಂತನಿತ್ತ ಕೊಡುಗೆಗೆ ಸರಿ ಸಾಟಿಯಾದುದು ಇನ್ನೊಂದಿಲ್ಲ. ಆ ಭಗವಂತ ಕೊಟ್ಟಿರುವುದನ್ನು ಸದುಪಯೋಗ ಪಡಿಸಿಕೊಳ್ಳಬೇಕಾದುದು ಮನುಷ್ಯನ ಧರ್ಮವಾಗಿದೆ. ದುಡಿಮೆಯಿಲ್ಲದ ಮತ್ತು ಶ್ರಮ ಪಡದೇ ಸಂಪತ್ತು ಬಯಸುವವರು ಬಹಳ ಜನರಿದ್ದಾರೆ. ಶ್ರಮದಿಂದ ಸಂಪಾದಿಸಿದ ಸಂಪತ್ತು ಸುಖ, ಶಾಂತಿ ತಂದುಕೊಡಬಲ್ಲದು. ಶ್ರಮ ಪಡದ ಸಂಪತ್ತು ಶಾಶ್ವತವಲ್ಲ. ಆದ್ದರಿಂದ ಶ್ರೀ ಜಗದ್ಗುರು ರೇಣುಕಾಚಾರ್ಯರು 'ವೃತ್ತಿಶ್ಚೈತನ್ಯ ರೂಪಿಣಿ' ಎಂದು



ಸಾರಿದ್ದಾರೆ. ಮನುಷ್ಯನಲ್ಲಿ ಅತಿಯಾದ ವೈಚಾರಿಕತೆ ಬೆಳೆದು ಧರ್ಮದಲ್ಲಿ ಶ್ರದ್ಧೆ, ಹಿರಿಯರಲ್ಲಿ ಗೌರವ ಕೊಡದ ಜನರು ಹೆಚ್ಚುತ್ತಿದ್ದಾರೆ.

ಜೀವನೋತ್ಸಾಹಕ್ಕೆ ಯೋಗ್ಯ ಮಾರ್ಗದರ್ಶನ ಮತ್ತು ಸಂಸ್ಕಾರ ಕೊಟ್ಟರೆ ಬದುಕಿನಲ್ಲಿ ನೆಮ್ಮದಿ ಕಾಣಲು ಸಾಧ್ಯವಾಗುತ್ತದೆ. ಲಿಂಗದಹಳ್ಳಿ ಹಿರೇಮಠದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಕಾಯಕ ಧರ್ಮ ಅನುಸರಿಸಿ ಭೌತಿಕ ಮಾರ್ಗದಲ್ಲಿ ನಡೆಯುವ ಜನ ಸಮುದಾಯಕ್ಕೆ ದಿಕ್ಸೂಚಿಯಾಗಿದ್ದಾರೆ. ಅವರ ಸರಳತೆ ಮತ್ತು ಮುಗ್ಧ ಮನೋಭಾವದಿಂದಾಗಿ ಭಕ್ತ ಸಂಕುಲದ ಸಂತೋಷಕ್ಕೆ ಕಾರಣರಾಗಿದ್ದಾರೆ ಎಂದು ಹೇಳಿ, ಶ್ರೀಗಳವರಿಗೆ ಶ್ರೀ ಪೀಠದಿಂದ ಫಲ–ಪುಷ್ಪ ಸ್ಮರಣಿಕೆ ನೀಡಿ ಶುಭ ಹಾರೈಸಿದರು.

ಕಣ್ವಕುಪ್ಪಿ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು, ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ರಟ್ಟಿಹಳ್ಳಿ ಕಬ್ಬಿಣಕಂಥಿಮಠದ ಶಿವಲಿಂಗ ಶಿವಾಚಾರ್ಯರು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು, ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯರು, ಕಡೇನಂದಿಹಳ್ಳಿ ರೇವಣಸಿದ್ಧ ಶಿವಾಚಾರ್ಯರು, ನಾಗವಂದ ಹೊರಗಿನಮಠದ ಶಿವಾನಂದ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

> ನೇತೃತ್ವ ವಹಿಸಿದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಹಿರೇಮಠದ ಇತಿಹಾಸದಲ್ಲಿ ಇಂದು ಅವಿಸ್ಮರಣೀಯವಾದ ಪವಿತ್ರ ದಿನವಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳವರ ಮಾರ್ಗದರ್ಶನದಲ್ಲಿ ಲಿಂಗದಹಳ್ಳಿ ಹಿರೇಮಠದ ಅಭಿವೃದ್ಧಿ ಮಾಡಿರುವೆ. ಈ ಭಾಗದ ಭಕ್ತರಿಗೆ ಸಂಸ್ಕಾರ, ಸದ್ವಿಚಾರಗಳನ್ನು ಮನೆ ಮನಕ್ಕೆ ಮುಟ್ಟಿಸಿದ ಸಂತೃಪ್ತ ಮನೋಭಾವ ನಮ್ಮದಾಗಿದೆ ಎಂದರು.

ಶ್ರೀ ರಂಭಾಪುರಿ ಜಗದ್ಗುರುಗಳ 33ನೇ ವರ್ಷದ ಪೀಠಾರೋಹಣದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಅಡ್ಡಪಲ್ಲಕ್ಕಿ ಮಹೋತ್ಸವ, ಸ್ವಯಂಭು ಸೋಮೇಶ್ವರ ಮಾಂಗಲ್ಯ ಮಂದಿರ ಲೋಕಾರ್ಪಣೆ ಮತ್ತು ಶ್ರೀ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜಾ ನೆರವೇರಿದವು. ಸಹಸ್ರಾರು ಭಕ್ತರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಪಡೆದರು. ಹುಬ್ಬಳ್ಳಿಯ ಮಹಿಳಾ ಮಂಡಳದ ಸದಸ್ಯರಿಂದ ಭಕ್ತಿ ಗೀತೆ ಜರುಗಿತು. ಮಾಸೂರಿನ ಗುರುಪ್ರಸಾದ್ ಹಿರೇಮಠ ನಿರೂಪಿಸಿದರು.

## ರಾಹುಲ್ ಆಸ್ತಿ 20.4 ಕೋಟಿ ರೂ.

**■ವಿಜಯಸಾಕ್ಷಿ ಸುದ್ದಿ, ಕೋಝಿಕೋಡ್**

ಕೇರಳದ ವಯನಾಡು ಲೋಕಸಭಾ ಕ್ಷೇತ್ರದಿಂದ ಎರಡನೇ ಬಾರಿಗೆ ಆಯ್ಕೆ ಬಯಸಿ ನಾಮಪತ್ರ ಸಲ್ಲಿಸಿರುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರು 20.4 ಕೋಟಿ ಮೌಲ್ಯದ ಆಸ್ತಿ ಹೊಂದಿದ್ದು 2019ರ ಬಳಿಕ ಸುಮಾರು 6 ಕೋಟಿ ರೂಪಾಯಿ ಮೌಲ್ಯ ಹೆಚ್ಚಾಗಿದೆ ಎಂದು ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ. ಜೊತೆಗೆ 18 ಪ್ರಕರಣಗಳಲ್ಲಿ 'ಮೋದಿ ಉಪನಾಮ' ಹೇಳಿಕೆಗಾಗಿ ಗುಜರಾತ್ ನ್ಯಾಯಾಲಯ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ದೋಷಿ ಎಂದು ಘೋಷಿಸಿದ್ದು, ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ ಎಂದು ಅಫಿಡವಿಟ್‌ನಲ್ಲಿ ಸಲ್ಲಿಸಿದೆ.

## ನಿಧನ ವಾರ್ತೆ



ರೋಣ: ತಾಲೂಕಿನ ಬೆಳವಣಕಿ ಗ್ರಾಮದ ಹಿರಿಯರೂ, ನಿವೃತ್ತ ಶಿಕ್ಷಕರೂ ಆಗಿದ್ದ ವಿರೂಪಾಕ್ಷಪ್ಪ ಗುರುಪಾದಪ್ಪ ಚರೇದ (ಸೊಬರದ) (78) ದಿ.04–04–2024ರ ಗುರುವಾರ ಸಂಜೆ ನಿಧನರಾದರು.

ಮೃತರು ಪತ್ನಿ, ಮೂವರು ಪುತ್ರರು ಸೇರಿದಂತೆ ಅಪಾರ ಬಂದು–ಬಳಗ ಅಗಲಿದ್ದಾರೆ.ಮೃತರ ಅಂತ್ಯಕ್ರಿಯೆ ಶುಕ್ರವಾರ ದಿ.5–04–2024ರ ಮುಂಜಾನೆ 10 ಗಂಟೆಗೆ ಬೆಳವಣಕಿ ಗ್ರಾಮದ ಹಿರೇಮಠದ ರುದ್ರಭೂಮಿಯಲ್ಲಿ ನೆರವೇರಲಿದೆ.

## ವಿದ್ಯಾರ್ಥಿಗಳ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ ನರಸಾಪುರ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2009-10ರಿಂದ 2014-15ನೇ ಸಾಲಿವರೆಗೆ ಮೊದಲನೇ ವರ್ಷದ (ಸಿ-09 ಪಠ್ಯಕ್ರಮ) ಡಿಪ್ಲೋಮಾ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಹಾಗೂ 2011-12ರಿಂದ 2015-16ನೇ ಸಾಲಿನವರೆಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ (ಸಿ-09 ಪಠ್ಯಕ್ರಮ) ಪ್ರವೇಶ ಪಡೆದ ಐ.ಟಿ.ಐ. ವಿದ್ಯಾರ್ಥಿಗಳಿಗೆ ಮತ್ತು 2016-17 ಹಾಗೂ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ (ಸಿ-15 ಪಠ್ಯಕ್ರಮ) ಎರಡನೇ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24ನೇ ಶೈಕ್ಷಣಿಕ ಸಾಲಿನ 2024ರ ಮೇ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶವನ್ನು ಕಲ್ಪಿಸಿ ಸರ್ಕಾರವು ಅನುಮತಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಈ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ 2024ರ ಮೇ ಸೆಮಿಸ್ಟರ್ ಪರೀಕ್ಷೆಗೆ ನಿಯಮಾನುಸಾರ ಪರೀಕ್ಷಾ ಶುಲ್ಕವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳು ನಿಗದಿತ ದಿನಾಂಕದೊಳಗಾಗಿ ಪಾವತಿಸಿ ಪರೀಕ್ಷೆಗೆ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್, ನಾಗಸಮುದ್ರ ರಸ್ತೆ, ನರಸಾಪೂರ, ಬೆಟಗೇರಿ-ಗದಗ. ದೂ.ಸಂ-08372-246486 ಸಂಪರ್ಕಿಸಬಹುದಾಗಿದೆ.

## ಅಗತ್ಯತೆಗೆ ಅನುಗುಣವಾಗಿ ಕಾರ್ಯತಂತ್ರ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಜಲಾಶಯಗಳಲ್ಲಿ ಇರುವ ನೀರಿನ ಸಂಗ್ರಹಣೆಯನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದೆ. ಹಿಂದಿನ ವರ್ಷಗಳ ಮಾಹಿತಿಯ ಆಧಾರದ ಮೇಲೆ ಕುಡಿಯುವ ನೀರಿನ ಕೊರತೆ ಉಂಟಾಗುವ ಗ್ರಾಮಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಈ ಗ್ರಾಮಗಳ ವಸ್ತುಸ್ಥಿತಿಯ ಮೇಲೆ ನಿಗಾವಹಿಸಲಾಗಿದೆ ಎಂದು ಜಿಲ್ಲಾ ವಿಪತ್ತು ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದ್ದಾರೆ.

ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮತ್ತು ಖಾಸಗಿ ಬೋರ್‌ವೆಲ್ ಗುರುತಿಸಿ ಅವುಗಳ ಮೂಲಕ ಕುಡಿಯುವ ನೀರಿನ ಕೊರತೆಯನ್ನು ಅಗತ್ಯತೆಗೆ ಅನುಗುಣವಾಗಿ ನೀಗಿಸಲು ಈಗಾಗಲೇ ಕ್ರಮ ವಹಿಸಲಾಗಿರುತ್ತದೆ. ಪರ್ಯಾಯ ಕಾರ್ಯತಂತ್ರವನ್ನು (ಕಾಂಟಿಂಜೆನ್ಸಿ ಯೋಜನೆ) ರೂಪಿಸಲಾಗಿದ್ದು, ಅಗತ್ಯತೆಗೆ ತಕ್ಕಂತೆ ಇದನ್ನು ಅನುಷ್ಠಾನ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

ಕುಡಿಯುವ ನೀರಿನ ಉದ್ದೇಶಕ್ಕಾಗಿ ಗ್ರಾಮ ಅಥವಾ ಪಟ್ಟಣಕ್ಕೆ ಅಗತ್ಯವಿರುವಷ್ಟು ನೀರನ್ನು ನಿಯಮಾನುಸಾರ ಪೈಪ್‌ಲೈನ್ ಮೂಲಕ ಪೂರೈಸಲಾಗುತ್ತಿದೆ. ಅಸ್ತಿತ್ವದಲ್ಲಿರುವ ನೀರು ಸರಬರಾಜು ಯೋಜನೆಗಳ ವಿದ್ಯುತ್ ಪಂಪ್‌ಗಳು, ಕೈ ಪಂಪುಗಳ ದುರಸ್ತಿ, ಕಡಿಮೆ ನೀರಿನ ಲಭ್ಯತೆ ಇರುವ ಬೋರ್‌ವೆಲ್‌ಗಳನ್ನು ಫ್ಲಶಿಂಗ್ ಮಾಡುವುದು ಮತ್ತು ಆಳಗೊಳಿಸುವುದು ಮತ್ತು ಆರ್‌ಓ ಪ್ಲಾಂಟ್‌ಗಳ ನಿರ್ವಹಣೆ ಇತ್ಯಾದಿಗಳನ್ನು ತೆಗೆದುಕೊಳ್ಳಲಾಗಿದ್ದು ಇದರ ಮೇಲೆ ನಿಗಾವಹಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣ ಪ್ರಾಧಿಕಾರ ಮತ್ತು ತಾಲ್ಲೂಕು ಮಟ್ಟದ ಟಾಸ್ಕ್ ಪೋರ್ಸ್ ಸಮಿತಿಗಳ ಸಭೆಗಳನ್ನು ಪ್ರತಿವಾರ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

### ಅತೀ ಹೆಚ್ಚು ತಾಪಮಾನ ಸಮಯದಲ್ಲಿ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು

# ಬಿಸಿಲ ಬೇಗೆಯ ನಿರ್ಲಕ್ಷ್ಯ ಬೇಡ

■ ವಿಜಯಸಾಕ್ಷಿ ಸುದ್ದಿ, ಗದಗ



ಭಾರತ ಹವಾಮಾನ ಇಲಾಖೆಯ ಮುನ್ಸೂಚನೆಯನ್ವಯ, ದೇಶದ ಹೆಚ್ಚಿನ ಭಾಗಗಳಲ್ಲಿ ಸಾಮಾನ್ಯ ಗರಿಷ್ಠ ತಾಪಮಾನವನ್ನು ಸೂಚಿಸುತ್ತದೆ. ಪ್ರಸ್ತುತ, ರಾಜ್ಯದ ಉತ್ತರ ಒಳನಾಡು, ದಕ್ಷಿಣ ಒಳನಾಡು ಮತ್ತು ಕರಾವಳಿ ಪ್ರದೇಶಗಳ ಕೆಲವು ಭಾಗಗಳಲ್ಲಿ ಸಾಮಾನ್ಯ ತಾಪಮಾನಕ್ಕಿಂತ 2-3 ಡಿಗ್ರಿಗಳಷ್ಟು ಅಧಿಕ ತಾಪಮಾನ ದಾಖಲಾಗುತ್ತಿದ್ದು, ಇದು ಮಾನವ ಹಾಗೂ ಪ್ರಾಣಿಗಳ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಭಾರತೀಯ ಹವಾಮಾನ ಇಲಾಖೆಯು ಏಪ್ರಿಲ್ 1ರಂದು ಬಿಡುಗಡೆ ಮಾಡಿದ ಹವಾಮಾನ ಸಂಭವನೀಯತೆಯ ಮುನ್ನೋಟವನ್ನು ಆಧರಿಸಿ, ರಾಜ್ಯದಲ್ಲಿ ಏಪ್ರಿಲ್ ಮಾಹೆಯಿಂದ ಮೇ-2024ರ ಅವಧಿಯಲ್ಲಿ ಮುಂಬರುವ ಬಿಸಿ ವಾತಾವರಣವು ಸಾಮಾನ್ಯ ತಾಪಮಾನಕ್ಕಿಂತ ಹೆಚ್ಚಾಗಿ ಇರುತ್ತದೆ ಎಂದು ಸೂಚಿಸಿದೆ. ತಾಪಮಾನದ ಹೆಚ್ಚಳವು ರಾಜ್ಯದಾದ್ಯಂತ ಸಾಮಾನ್ಯ ಶಾಖದ ಅಲೆಗಳ ದಿನಗಳನ್ನು 2-14 ದಿನಗಳು ಮೀರುವ ಸಾಧ್ಯತೆಯಿದೆ.

ಅತೀ ಹೆಚ್ಚು ತಾಪಮಾನದ ಪ್ರತಿಕೂಲ ಪರಿಣಾಮವನ್ನು ತಡೆಗಟ್ಟಲು ಮತ್ತು ತಗ್ಗಿಸಲು ಹಲವು ಸಲಹೆ ಸೂಚನೆಗಳನ್ನು ನೀಡಿದೆ. ಸಾಧ್ಯವಾದಷ್ಟು ಮಟ್ಟಿಗೆ ವಿಶೇಷವಾಗಿ ಗರಿಷ್ಠ ತಾಪಮಾನದ ಅವಧಿಯಲ್ಲಿ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸುವುದು. ಕಾಲಕಾಲಕ್ಕೆ ಸಾಕಷ್ಟು ನೀರು ಕುಡಿಯುವುದು. ಹಗುರವಾದ, ತಿಳಿ ಬಣ್ಣದ ಸಡಿಲವಾದ ಮತ್ತು ಹತ್ತಿ ಬಟ್ಟೆಗಳನ್ನು ಧರಿಸುವುದು. ಬಿಸಿಲಿನಲ್ಲಿ ಹೋಗುವಾಗ ರಕ್ಷಣೆಗಾಗಿ ಕನ್ನಡಕ, ಛತ್ರಿ / ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸುವುದು. ಹೊರಗಿನ ಉಷ್ಣತೆಯು ಅಧಿಕವಾಗಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸುವುದು (ಮಧ್ಯಾಹ್ನ 12ರಿಂದ 3 ಗಂಟೆಯವರೆಗೆ ಹೊರಗೆ ಕೆಲಸ ಮಾಡುವುದನ್ನು). ಪ್ರಯಾಣ ಮಾಡುವಾಗ ನೀರನ್ನು ಜೊತೆಯಲ್ಲಿ ಒಯ್ಯುವುದು. ಸಾಧ್ಯವಾದಷ್ಟು ಬಿಸಿ ಆಹಾರವನ್ನು ಸೇವಿಸುವುದು. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಡದಿರುವುದು. ಮೂರ್ಛೆ ಅಥವಾ ಅನಾರೋಗ್ಯ ಅನಿಸಿದರೆ ತಕ್ಷಣ ವೈದ್ಯರನ್ನು ಭೇಟಿಮಾಡುವುದು.

ನಿಂಬೆ ನೀರು, ಮಜ್ಜಿಗೆ ಮುಂತಾದ ಮನೆಯಲ್ಲಿ ತಯಾರಿಸಿದ ಪಾನೀಯಗಳು ಮತ್ತು ಒಆರ್‌ಎಸ್ ಬಳಸುವುದು. ಸಾಕುಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ಒದಗಿಸುವುದು. ಮನೆಯನ್ನು ತಂಪಾಗಿರಿಸಲು ಶಟರ್ ಅಥವಾ ಸನ್‌ಶೇಡ್‌ಗಳನ್ನು ಬಳಸುವುದು.

ಅತೀ ಹೆಚ್ಚು ತಾಪಮಾನದಿಂದ ಸಾಮಾನ್ಯವಾಗಿ ನಿರ್ಜಲೀಕರಣ, ಶಾಖ ಸೆಳತ, ಶಾಖದ ಬಳಲಿಕೆ ಅಥವಾ ಶಾಖದ ಆಘಾತದಂತಹ ಆರೋಗ್ಯದ ದುಷ್ಪರಿಣಾಮಗಳು ಉಂಟಾಗುವ ಸಾಧ್ಯತೆ ಇದ್ದು, ಅವುಗಳ ರೋಗ ಲಕ್ಷಣಗಳು ಹೀಗಿವೆ.

ಶಾಖ ಸೆಳೆತಗಳು: ಎಡರ್ನಾ (ಊತ) ಮತ್ತು ಮೂರ್ಛೆ, ಸಾಮಾನ್ಯವಾಗಿ 39ಲಿಅ ಅಂದರೆ 102ಲಿಈ ಗಿಂತ ಕಡಿಮೆ ಜ್ವರದಿಂದ ಕೂಡಿರುತ್ತದೆ.

ಶಾಖದ ಬಳಲಿಕೆ: ಆಯಾಸ, ದೌರ್ಬಲ್ಯ, ತಲೆ ತಿರುಗುವಿಕೆ, ತಲೆನೋವು, ವಾಕರಿಕೆ, ವಾಂತಿ, ಸ್ನಾಯು ಸೆಳೆತ ಮತ್ತು ಬೆವರುವುದು.

ಶಾಖಾಘಾತ (ಸನ್‌ಸ್ಟ್ರೋಕ್): ದೇಹದ ಉಷ್ಣತೆಯು 40ಲಿ ಅ ಅಂದರೆ 104ಲಿ ಈ ಅಥವಾ ಅದಕ್ಕಿಂತ ಹೆಚ್ಚಾಗುವುದು ಹಾಗೂ ಉಸಿರಾಟದಲ್ಲಿ ವ್ಯತ್ಯಯ ಮತ್ತು ಪ್ರಜ್ಞೆ ತಪ್ಪುವುದು.

ಸಂಬಂಧಿತ ಕಾಯಿಲೆಗೆ ಪ್ರಥಮ ಚಿಕಿತ್ಸೆ: ಅತೀ ಹೆಚ್ಚು ತಾಪಮಾನದಿಂದ ತುತ್ತಾದ ವ್ಯಕ್ತಿಯನ್ನು ನೆರಳಿನ ಅಡಿಯಲ್ಲಿ ತಂಪಾದ ಸ್ಥಳಕ್ಕೆ ಸ್ಥಳಾಂತರಿಸುವುದು. ಒದ್ದೆಯಾದ ಬಟ್ಟೆಯಿಂದ ಮೈ ಒರೆಸುವುದು/ತಂಪಾದ ಒದ್ದೆ ಬಟ್ಟೆಯನ್ನು ಹಾಕುವುದು ಹಾಗೂ ದೇಹದ ಉಷ್ಣತೆಯನ್ನು ತಗ್ಗಿಸಲು ತಲೆಯ ಮೇಲೆ ನೀರನ್ನು ಹಾಕುವುದು. ನೀರು ಅಥವಾ ಪುನರ್ಜಲೀಕರಣ ಪಾನೀಯಗಳಾದ ಓಆರ್‌ಎಸ್, ನಿಂಬೆ ಪಾನಕ ನೀಡುವುದು. ವ್ಯಕ್ತಿಗೆ ತಂಪಾದ ಗಾಳಿಯ ವ್ಯವಸ್ಥೆ ಮಾಡುವುದು. ಉತ್ತಮ ಗಾಳಿಗಾಗಿ ಬಟ್ಟೆಗಳನ್ನು ಸಡಿಲಗೊಳಿಸುವುದು. ರೋಗ ಲಕ್ಷಣಗಳು ಉಲ್ಬಣಗೊಂಡರೆ ಅಥವಾ ದೀರ್ಘಕಾಲದವರೆಗೆ ಇದ್ದರೆ ಅಥವಾ ವ್ಯಕ್ತಿಯು ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರೆ ಕೂಡಲೇ ವೈದ್ಯರನ್ನು ಸಂಪರ್ಕಿಸುವುದು. ಮದ್ಯಪಾನ, ಕಾಫಿ, ಶೇಖರಿಸಿದ ಪಾನೀಯವನ್ನು ನೀಡಬಾರದು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಆಗಿಂದಾಗೆ ತಣ್ಣೀರು ಸ್ನಾನ ಮಾಡುವುದು. ಹೊರಗೆ ಹೋಗುವಾಗ ನೀರಿನ ಬಾಟಲಿ, ಛತ್ರಿ /ಟೋಪಿ ಅಥವಾ ಕ್ಯಾಪ್, ಹ್ಯಾಂಡ್ಸವಲ್, ಹ್ಯಾಂಡ್ಫ್ಯಾನ್, ಎಲೆಕ್ಟ್ರೋಲೈಟ್ / ಗ್ಲುಕೋಸ್/ಒಆರ್‌ಎಸ್ ಅನ್ನು ಒಳಗೊಂಡಿರುವ ಅತೀ ಹೆಚ್ಚು ತಾಪಮಾನವನ್ನು ತಡೆಗಟ್ಟುವ ಕಿಟ್‌ಅನ್ನು ಒಯ್ಯಲು ನಾಗರಿಕರನ್ನು ಪ್ರೋತ್ಸಾಹಿಸುವುದು.

## ಪ್ರಾದೇಶಿಕ ಕಾರ್ಯಾಗಾರಕ್ಕೆ ಎಂಡಿ ಭೇಟಿ

■ ವಿಜಯಸಾಕ್ಷಿ ಸುದ್ದಿ, ಗದಗ




ವಾ.ಕ.ರ.ಸಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಅವರು ಇತ್ತೀಚೆಗೆ ಪ್ರಾದೇಶಿಕ ಕಾರ್ಯಾಗಾರಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ವಾಹನಗಳ ದುರಸ್ತಿ ಕಾರ್ಯಗಳನ್ನು ವೀಕ್ಷಿಸಿ, ವಾಹನಗಳನ್ನು ಸರಿಯಾಗಿ ದುರಸ್ತಿ ಮಾಡಬೇಕೆಂದು ತಿಳಿಸಿದರು.

ಬೇಸಿಗೆ ಇರುವುದರಿಂದ ಜಾಗೃತೆಯಿಂದ ಬೆಂಕಿ ಅವಘಡಗಳ ಬಗ್ಗೆ ನಿಗಾ ವಹಿಸುವಂತೆ ಸೂಚಿಸಿದರು. ವಾಹನಗಳನ್ನು ವ್ಯವಸ್ಥಿತವಾಗಿ ನಿಲುಗಡೆ ಮಾಡುವುದರ ಕುರಿತು ಸಂಬಂಧಿಸಿದ ಅಧಿಕಾರಿ/ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು.

ಹುಬ್ಬಳ್ಳಿ ಗ್ರಾಮಾಂತರ ಘಟಕ-3ಕ್ಕೆ ಭೇಟಿ ನೀಡಿ, ಘಟಕದ ಆವರಣ ಸ್ವಚ್ಛವಾಗಿಡುವುದು, ಸಾರ್ವಜನಿಕ ದೂರುಗಳಿಗೆ ಆಸ್ಪದ ನೀಡದಂತೆ ವಾಹನಗಳ ಕಾರ್ಯಾಚರಣೆ ಮಾಡುವಂತೆ ಹಾಗೂ ದೂರುಗಳು ಬಂದಲ್ಲಿ ಸಂಬಂಧಿಸಿದ ಅಧಿಕಾರಿ/ ಸಿಬ್ಬಂದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಜಿಲ್ಲಾ ಮಟ್ಟದ ಕ್ಯಾಶ್ ರಿಲೀಸ್ ಕಮಿಟಿ ರಚನೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ನಿರ್ದೇಶನದಂತೆ ಮಾದರಿ ನೀತಿ ಸಂಹಿತೆ ಜಾರಿ ಇರುವ ಸಂದರ್ಭದಲ್ಲಿ ಚೆಕ್‌ಪೋಸ್ಟ್ ಹಾಗೂ ಇತರ ಸ್ಥಳಗಳಲ್ಲಿನ ತಪಾಸಣೆಯಲ್ಲಿ ದಾಖಲೆ ಹೊಂದಿರದ ಹಣವನ್ನು ವಶಕ್ಕೆ ಪಡೆದು ಸೀಜ್ ಮಾಡಲಾಗುತ್ತದೆ. ಸಂಬಂಧಿಸಿದವರು ಸೀಜ್ ಮಾಡಿದ ಹಣಕ್ಕೆ ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ, ಪರಿಶೀಲಿಸಿ ಸದರಿ ಹಣ ಬಿಡುಗಡೆ ಮಾಡಲು ಜಿಲ್ಲಾಮಟ್ಟದ ಕ್ಯಾಶ್ ರಿಲೀಸ್ ಕಮಿಟಿಯನ್ನು ರಚಿಸಿ, ಜಿಲ್ಲಾ ಚುನಾವಣಾ ಅಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶ ಹೊರಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಆಗಿರುವ ಕೈಮಗ್ಗ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಮೋನಾ ರೋತ್ (85279819880) ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಕ್ಯಾಶ್ ರಿಲೀಜ್ ಕಮಿಟಿ ರಚಿಸಲಾಗಿದೆ. ಮತ್ತು ಈ ಕಮಿಟಿ ಸಂಚಾಲಕರಾಗಿ ಚುನಾವಣಾ ವೆಚ್ಚದ ಉಸ್ತುವಾರಿ ಜಿಲ್ಲಾ ನೋಡಲ್ ಅಧಿಕಾರಿ ಆಗಿರುವ ಎಚ್.ಡಿ.ಎಂ.ಸಿ.ಯ ಮುಖ್ಯ ಲೆಕ್ಕಾಧಿಕಾರಿ ವಿಶ್ವನಾಥ ಪಿ.ಬಿ. (9844679079) ಹಾಗೂ ಜಿಲ್ಲಾ ಖಜಾನೆ ಅಧಿಕಾರಿ ವೈ.ವೈ ಹೊನ್ನಳ್ಳಿ (0836-2448251, 9449739914) ಅವರು ಸದಸ್ಯರಾಗಿದ್ದಾರೆ.

ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದ ಹಣಕ್ಕೆ ದಾಖಲೆಯೊಂದಿಗೆ ಮನವಿ ಸಲ್ಲಿಸದಲ್ಲಿ ಅದನ್ನು ಕೂಲಂಕುಷವಾಗಿ ಪರಿಶೀಲಿಸಿ, ನೀತಿ ಸಂಹಿತೆ ಉಲ್ಲಂಘನೆಗೆ ಇದು ಒಳಪಡುವುದಿಲ್ಲ ಎಂಬುವುದನ್ನು ಖಾತರಿ ಮಾಡಿಕೊಂಡು ಜಿಲ್ಲಾ ಕ್ಯಾಶ್ ರಿಲೀಸ್ ಕಮಿಟಿ ಹಣ ಮರಳಿ ನೀಡಲು ಕ್ರಮಕೈಗೊಳ್ಳುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

# ಅರ್ಹರು ಕಡ್ಡಾಯವಾಗಿ ಮತ ಚಲಾಯಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಅರ್ಹ ಮತದಾರರೆಲ್ಲರೂ ಕಡ್ಡಾಯವಾಗಿ ಮತದಾನ ಮಾಡುವ ಸಂಕಲ್ಪ ತೊಡುವ ಮೂಲಕ ಪ್ರಜಾಪ್ರಭುತ್ವದ ಆಶಯ ಸಾಕಾರಗೊಳಿಸಬೇಕು ಎಂದು ಬಟ್ಟೂರ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಎಂ.ಆರ್. ಮಾದರ ಹೇಳಿದರು.

ಲಕ್ಷ್ಮೇಶ್ವರ ತಾಲೂಕಿನ ಬಟ್ಟೂರ ಗ್ರಾಮದ ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಚುನಾವಣೆ ಪ್ರಜಾಪ್ರಭುತ್ವದ ಹಬ್ಬವೆಂದು ಭಾವಿಸಿ ಸಂಭ್ರಮಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ಕಾರ್ಮಿಕರು ಕಡ್ಡಾಯವಾಗಿ ಮತ ಚಲಾಯಿಸಬೇಕು. ಯಾವುದೇ ಆಸೆ-ಆಮಿಷಕ್ಕೆ ಒಳಗಾಗದೇ ಮತ ಚಲಾಯಿಸಿ ಎಂದರು.

ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ತಾಲೂಕಿನ ಗ್ರಾಮೀಣ ಪ್ರದೇಶದ ಉದ್ಯೋಗ ಖಾತ್ರಿ ಕಾಮಗಾರಿ ಸ್ಥಳದಲ್ಲಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಣೆ ನೀಡುವ ಕಾರ್ಯ ಮಾಡುತ್ತಿದ್ದೇವೆ. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನಕ್ಕೆ ನಿಗದಿ ಪಡಿಸಲಾಗಿದೆ. ಎಲ್ಲರೂ ಪ್ರಜಾಪ್ರಭುತ್ವದ ಮತದಾನದಲ್ಲಿ ಭಾಗಿಯಾಗುವಂತೆ ತಿಳಿಸಿದರು.

ಈ ಬೇಸಿಗೆ ಅವಧಿಯಲ್ಲಿ ಹೆಚ್ಚು ಕೆಲಸ ಒದಗಿಸಲು ನರೇಗಾ ಯೋಜನೆಯಡಿ ಬದು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದ್ದು, ರೈತರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಡಿಇಓ ಹಾಲೇಶ ಪಾಟೀಲ, ಗ್ರಾಮ ಕಾಯಕ ಮಿತ್ರ ಗಂಗಮ್ಮ ಹರಿಜನ, ಗ್ರಾ.ಪಂ ಸಿಬ್ಬಂದಿಗಳು, ನರೇಗಾ ಕಾಯಕ ಬಂಧುಗಳು ಇತರರಿದ್ದರು.

## ಬಿಜೆಪಿಗೆ ತಕ್ಕ ಪಾಠ ಕಲಿಸಿ: ಒಮರ್


■ ವಿಜಯಸಾಕ್ಷಿ ಸುದ್ದಿ, ಶ್ರೀನಗರ,

ಜಮ್ಮು ಕಾಶ್ಮೀರಕ್ಕೆ ನೀಡಲಾಗಿದ್ದ ಸಂವಿಧಾನದ ವಿಶೇಷ ಸ್ಥಾನಮಾನ ಕಲ್ಪಿಸುವ ಆರ್ಟಿಕಲ್ 370 ರದ್ದು ಮಾಡಿದ ಬಿಜೆಪಿಗೆ ಯಾವುದೇ ಕಾರಣ-ಕ್ಕೂ ಮತ ನೀಡಬೇಡಿ ಎಂದು ನ್ಯಾಷನಲ್ ಕಾನ್ಫರೆನ್ಸ್ ಹಿರಿಯ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಜನರಿಗೆ ಮನವಿ ಮಾಡಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ, ಬಿಜೆಪಿಗೆ ಕಣಿವೆ ಭಾಗದ ಜನರೆಲ್ಲಾ ಒಂದೇ ಪ್ರಶ್ನೆ ಕೇಳಬೇಕಾಗಿದೆ, 2019 ರ ಆಗಸ್ಟ್ 5 ರಂದು ತೆಗೆದುಕೊಂಡ ನಿರ್ಧಾರ ಸರಿಯೋ ತಪ್ಪೋ ಅದಕ್ಕೆ ಬಿಜೆಪಿಗೆ ಉತ್ತರ ನೀಡಬೇಕಾದರೆ ಈ ಚುನಾವಣೆಯಲ್ಲಿ ಬಿಜೆಪಿಗೆ ಯಾರೂ ಮತ ನೀಡಬಾರದು ಎಂದು ಹೇಳಿದ್ದಾರೆ.

### ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ರೇಣುಕಾಚಾರ್ಯರ ಸಂದೇಶಗಳು ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ



ಸುಖದ ಮೂಲ ಧರ್ಮಾಚರಣೆಯಲ್ಲಿದೆ. ಬಾಳಿನ ಭಾಗ್ಯೋದಯಕ್ಕೆ ಪೂರ್ವಜರ ಚಿಂತನಗಳು ಪೂರಕವಾಗಿವೆ. ಸಮರ ಜೀವನವನ್ನು ಅಮರ ಜೀವನದೆಡೆಗೆ ಕೊಂಡೊಯ್ಯಲು ಮತ್ತು ಪರಿಶುದ್ಧವಾದ ಬಾಳಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ ಸಂದೇಶಗಳು ದಾರಿದೀಪವಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಗೌರಾಪುರ ಶ್ರೀ ಚನ್ನಬಸವೇಶ್ವರ ಸಮುದಾಯ ಭವನದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭೌತಿಕ ಜೀವನದಲ್ಲಿ ಬೆಚಿದು, ಬಳಲಿ ಬಂದವರಿಗೆ ಆಧ್ಯಾತ್ಮ ಜ್ಞಾನದ ಸಂಪತ್ತು ಆತ್ಮಬಲ ಉಂಟು ಮಾಡುತ್ತದೆ. ಜಾತಿ ಜನಾಂಗಗಳ ಗಡಿ ಮೀರಿ ಮಾನವೀಯ ಉದಾತ್ತ ಮೌಲ್ಯಗಳನ್ನು ಸದಾ ಬೆಳೆಸುವಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಕೊಡುಗೆ ಅಮೂಲ್ಯವಾಗಿದೆ. ಸಾಮರಸ್ಯ, ಸೌಹಾರ್ದತೆಯ ಬದುಕಿನ ಬೆಸುಗೆಗೆ ರೇಣುಕಾಚಾರ್ಯರು ಬೋಧಿಸಿದ ಚಿಂತನೆಗಳ ಪರಿಪಾಲನೆಯ ಅವಶ್ಯಕತೆ ಬಹಳಷ್ಟಿದೆ. ಸಾತ್ವಿಕ-ತಾತ್ವಿಕ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಳ್ಳಲು ಅವರು ಬೋಧಿಸಿದ ಶಿವಾದ್ವೈತ ಜ್ಞಾನ ಸಂಪತ್ತು ಉಜ್ವಲ ಬಾಳಿನ ಶ್ರೇಯಸ್ಸಿಗೆ ಕಾರಣವಾಗಿವೆ.

ಸಂಸ್ಕಾರ ಸಂಸ್ಕೃತಿಗಳ ಮೂಲಕ ಜನಮನವನ್ನು ತಿದ್ದಿ, ತೀಡಿ ಸನ್ಮಾರ್ಗಕ್ಕೆ ಕರೆತಂದ ಕೀರ್ತಿ ಅವರಿಗೆ ಸಲ್ಲುತ್ತದೆ. ಗೌರಾಪುರ ಗ್ರಾಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಅದ್ದೂರಿಯಾಗಿ ಜರುಗುತ್ತಿರುವುದು ತಮ್ಮೆಲ್ಲರಲ್ಲಿರುವ ಧರ್ಮನಿಷ್ಠೆಗೆ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸಕಲರಿಗೂ ಅಭ್ಯುದಯ ಬಯಸಿದ ಮತ್ತು ಮೌಲ್ಯಾಧಾರಿತ ಬದುಕಿನ ಸೂತ್ರಗಳನ್ನು ಬೋಧಿಸಿದ ಯುಗಪುರುಷರು ರೇಣುಕಾಚಾರ್ಯರು. ಸಂಸ್ಕೃತಿಯ ಪುನಶ್ಚೇತನದೊಂದಿಗೆ ಸಾಮಾಜಿಕ ಸತ್ಕ್ರಾಂತಿಗೆ ನೆಲೆಯಾದವರು ರೇಣುಕಾಚಾರ್ಯರು. ಅವರ ಆದರ್ಶ ಚಿಂತನಗಳನ್ನು ಮೈಗೂಡಿಸಿಕೊಂಡು ಬಾಳಬೇಕೆಂದರು.

ಸಮಾರಂಭದಲ್ಲಿ ಹುಣಸಘಟ್ಟ ಗುರುಮೂರ್ತಿ ಶಿವಾಚಾರ್ಯರು, ತೆಂಡೇಕೆರೆ ಗಂಗಾಧರ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ಬೀರೂರು ರುದ್ರಮುನಿ ಶಿವಾಚಾರ್ಯರು, ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಮುಖ್ಯ ಅತಿಥಿಗಳಾಗಿ ಬಿ.ಪಿ. ಶಿವಮೂರ್ತಿ, ಜಿ.ಹೆಚ್. ಜಯಮೂರ್ತಿ, ಎಸ್.ಎಸ್. ಶ್ರೀಕಂಠಪ್ಪ, ಚಿ.ಸ. ಪ್ರಭುಲಿಂಗ ಶಾಸ್ತ್ರಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಆಶೀರ್ವಾದ ಪಡೆದರು.

ಜಿ.ಎಸ್. ಶೇಖರಯ್ಯ, ಜಿ.ಆರ್. ಓಂಕಾರಯ್ಯ, ಡಾ. ಜಿ.ಆರ್. ಶಿವಪ್ರಸಾದ್, ಡಿ.ರಾಜಣ್ಣ, ಜಿ.ಸಿ. ಲಿಂಗಮೂರ್ತಿ, ಜಿ.ಉಮಾಪತಿ ಮೊದಲಾದ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ನಿವೃತ್ತ ಶಿಕ್ಷಕ ಸೋಮಶೇಖರ ಸ್ವಾಗತಿಸಿದರು. ಶಾಂತಾ ಆನಂದ ಭಕ್ತಿಗೀತೆ ಹಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲೂಕ ಜಂಗಮ ಸಮಾಜದ ಅಧ್ಯಕ್ಷ ಎಸ್.ವಿ. ಗಂಗಾಧರಯ್ಯ, ಸರ್ವ ಜನಾಂಗದ ಉನ್ನತಿಗೆ ಧರ್ಮವೇ ಮೂಲವಾಗಿದೆ. ಪೂರ್ವದ ಋಷಿಮುನಿಗಳು ಮತ್ತು ಆಚಾರ್ಯರು ಅಮೂಲ್ಯವಾದ ಕೊಡುಗೆ ಕೊಟ್ಟಿದ್ದಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಬಂಧುತ್ವದ ಚಿಂತನಗಳನ್ನು ಬೋಧಿಸುವುದರ ಮೂಲಕ ಭಕ್ತ ಸಮುದಾಯದ ಭಾವನೆಗಳನ್ನು ಪರಿಶುದ್ಧಗೊಳಿಸಿದ್ದಾರೆ. ಅಂಥ ಮಹಿಮಾನ್ವಿತರ ಸಿದ್ಧಿ ಸಾಧನೆಗಳು ಜಿಲ್ಲೆಯ ಬೇರೆ ಬೇರೆ ಭಾಗಗಳಲ್ಲಿ ಪ್ರಸಾರಪಡಿಸುವ ಸದುದ್ದೇಶದ ಹಿನ್ನೆಲೆಯಲ್ಲಿ ಈ ವರುಷ ಗೌರಾಪುರದಲ್ಲಿ ಜರುಗುತ್ತಿರುವುದು ನಮ್ಮೆಲ್ಲರಿಗೂ ಸಂತೋಷವನ್ನು ತಂದಿದೆ ಎಂದರು.

ಶಿಕ್ಷಕಿ ಸೌಮ್ಯ ಮೋಹನ್‌ಕುಮಾರ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿ-ತು. ಸಹಸ್ರಾರು ಜನರು ಪಾಲ್ಗೊಂಡು ಜಗದ್ಗುರುಗಳ ಆಶೀರ್ವಾದ ಪಡೆದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka